# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 120 | ಆರ್‌ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 27–11–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 120 | RNI No: KARKAN/2023/88462 | Chitradurga | Date: 27-11-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಭಾರತದ ಭದ್ರ ಬುನಾದಿ ಸಂವಿಧಾನದಲ್ಲಿ ಅಡಗಿದೆ: ಡಿಡಿಪಿಐ 2

ಸಂವಿಧಾನ ರಕ್ಷಣೆ ಮಾಡುವ ಜವಾಬ್ದಾರಿ ಭವಿಷ್ಯದ ಪ್ರಜೆ ಮಕ್ಕಳ ಮೇಲಿದೆ: ಶಾಸಕ 3

ಧರ್ಮ ನಿಷ್ಠೆ ಎಂದರೆ ಪ್ರತಿಯೇ ಹೊರತು ದ್ವೇಷವಲ್ಲ..... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 27ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಹಿರಿಯೂರು ಉಪವಿಭಾಗದ ವ್ಯಾಪ್ತಿಯ ಕಲಮಾರನಹಳ್ಳಿ 66/11 ಕೆವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 2ನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ನಿರ್ವಹಿಸುವ ಪ್ರಯುಕ್ತ ಇದೇ ನ.27ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಬುರುಡುಕುಂಟೆ, ಯಳವಾರಹಟ್ಟಿ, ಹೊಸಹಳ್ಳಿ, ಗುಳ್ಯಾ, ಗುಳ್ಯಾಗೊಲ್ಲರಹಟ್ಟಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಗ್ರಾಹಕರು, ರೈತರು, ಸಾರ್ವಜನಿಕರು ಸಹಕರಿಸಬೇಕು ಎಂದು ಹಿರಿಯೂರು ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್.ಪೀರ್‌ಸಾಬ್ ತಿಳಿಸಿದ್ದಾರೆ.

### ನ.30ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ನ.30ರಂದು ಶನಿವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ.ಸಂದರ್ಶನದಲ್ಲಿ ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿಗಳು, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೋಗಳೊಂದಿಗೆ ಭಾಗವಹಿಸಬಹುದು.ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ವೈಶಾಲಿ ಗೇಟ್ ಹತ್ತಿರದ ಸ್ಟೇಡಿಯಂ ರಸ್ತೆಯಲ್ಲಿನ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳ ಉದ್ಘಾಟನೆ

» ಚಿತ್ರದುರ್ಗ

ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜು ವತಿಯಿಂದ ಇದೇ ನ.27ರಂದು ಬೆಳಿಗ್ಗೆ 10.30ಕ್ಕೆ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ 2024–25ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರೋವರ್ಸ್, ರೇಂಜರ್ಸ್ ಮತ್ತು ಇತರೆ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಭಾಗವಹಿಸುವರು. ನಿವೃತ್ತ ಪ್ರಾಂಶುಪಾಲ ಹಾಗೂ ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ವಿಶೇಷ ಉಪನ್ಯಾಸ ನೀಡುವರು. ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ಪ್ರೊ.ಸಿದ್ರಾಮ ಚನಗೊಂಡ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಸಾಮ್ರಾಟ್ ಲೇಔಟ್‌ನಲ್ಲಿ ನೇಣುಹಾಕಿಕೊಂಡು ಕಾರ್ಮಿಕ ಆತ್ಮಹತ್ಯೆ

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ಸಿದ್ದಾಪುರ ಅನಂತಸಾಲ್ವೆಂಟ್ ಬಳಿಯ ಸಾಮ್ರಾಟ್ ಲೇಔಟ್‌ನಲ್ಲಿ ಕೂಲಿಕಾರ್ಮಿಕನೊಬ್ಬ ಅನಾರೋಗ್ಯ ಹಿನ್ನೆಲೆಯಲ್ಲಿ ಕರೆಂಟ್ ಕಂಬದ ಆಂಗ್ಲರ್‌ಗೆ ನೇಣುಹಾಕಿಕೊಂಡು ಮೃತಪಟ್ಟಿರುತ್ತಾನೆ. ಮೃತಪಟ್ಟವನನ್ನು ಬಸವಬಾಗೇವಾಡಿ ತಾಲ್ಲೂಕಿನ ಸಲ್ಲಡಗಿ ಗ್ರಾಮದ ಯಮನಪ್ಪ(45) ಎಂದು ಗುರುತಿಸಿದ್ದು, ಕಳೆದ ಕೆಲವು ವರ್ಷಗಳಿಂದ ಇಲ್ಲಿಯೇ ಕೂಲಿಕಾರ್ಮಿಕನಾಗಿ ಕೆಲಸ ಮಾಡುತ್ತಿದ್ದ. ತನಗಿದ್ದ ಕ್ಯಾನ್ಸರ್ ಕಾಯಿಲೆಯಿಂದ ನೇಣುಹಾಕಿಕೊಂಡಿದ್ದಾನೆಂದು ಅವರ ಸಂಬಂಧಿ ಉಮೇಶ್ ಮಗಾವಿ ದೂರುನೀಡಿದ್ದು, ಪಿಎಸ್ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಸಮಯ ನೋಡಿ ರಾಜಕೀಯ ದಾಳ ಉರುಳಿಸಿದ ಶಾಸಕ ಟಿ.ರಘುಮೂರ್ತಿ

# ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿ ನೇಮಕ

» ನಮ್ಮಜನ ಸಮಾಚಾರ

ಚಿತ್ರದುರ್ಗ: ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ (ಡಿಸಿಸಿಬಿ) ಗೆ ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಅವರನ್ನು ಡಿಸಿಸಿ ಬ್ಯಾಂಕ್ ಗೆ ಸರ್ಕಾರ ನಾಮ ನಿರ್ದೇಶನ ಸದಸ್ಯರಾಗಿ ಆಯ್ಕೆ ಮಾಡಿ ಆದೇಶ ಹೊರಡಿಸಿದೆ.

ಜಿಲ್ಲೆಯಾದ್ಯಂತ ಚರ್ಚೆಗೆ ಗ್ರಾಸವಾಗಿದ್ದು ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ರಾಜಕೀಯ ಕಾರಣಕ್ಕೆ ಸ್ವಪಕ್ಷೀಯ ಶಾಸಕನನ್ನೇ ಬ್ಯಾಂಕ್ ಆಡಳಿತದಿಂದ ದೂರವಿಟ್ಟಿದ್ದಾರೆ ಮತ್ತು ನಾಮ ನಿರ್ದೇಶನ ಸ್ಥಾನಕ್ಕೂ ಸಹ ಅವಕಾಶ ಇರಬಾರದು ಎಂಬ ಕಾರಣಕ್ಕೆ ಸಚಿವ ಸುಧಾಕರ್ ಅಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಚಳ್ಳಕೆರೆ ಸಿ. ವೀರಭದ್ರಬಾಬು ಅವರನ್ನು ಸರ್ಕಾರದಿಂದ ನೇಮಕ ಮಾಡಿಸಿಕೊಂಡು ಬಂದಿದ್ದರು. ಆದರೆ ಈಗ ಸುಧಾಕರ್ ಶಿಷ್ಯನ ನಾಮ ನಿರ್ದೇಶನ ರದ್ದು ಮಾಡಿ ಆ ಸ್ಥಾನಕ್ಕೆ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಅವರನ್ನು ನಾಮನಿರ್ದೇಶನ ಸದಸ್ಯರಾಗಿ ಆದೇಶ ಮಾಡುವ ಮೂಲಕ ಸಚಿವ ಸುಧಾಕರ್ ಸೆಡ್ಡು ಒಡೆದು ಶಾಸಕ ರಘುಮೂರ್ತಿ ಡಿಸಿಸಿ ಬ್ಯಾಂಕ್ ಪ್ರವೇಶ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.




### ಸ್ವ-ಪಕ್ಷದಿಂದ ಆರೋಪ ಕೇಳಿ ಬಂದಿತ್ತು

ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿರುವ ಸುಧಾಕರ್ ಮತ್ತೆ ಬ್ಯಾಂಕ್ ಆಡಳಿತವನ್ನು ತೆಕ್ಕೆಗೆ ತೆಗೆದುಕೊಳ್ಳಲು ಪ್ರಯತ್ನಿಸುತ್ತಿದ್ದು ಅದಕ್ಕಾಗಿ ಪ್ರತಿಸ್ಪರ್ಧಿಗಳನ್ನು ಹಣಿಯುವ ಉದ್ದೇಶದಿಂದ ಅಧಿಕಾರಿಗಳ ಮೇಲೆ ಒತ್ತಡ ತಂದು ಅನರ್ಹತೆ ಅಸ್ತ್ರ ಪ್ರಯೋಗಿಸುವ ಜೊತೆಗೆ ತನ್ನದೇ ಪಕ್ಷದ ಶಾಸಕ ಟಿ.ರಘುಮೂರ್ತಿ ಅವರನ್ನು ದೂರವಿಡುವಲ್ಲಿ ಈ ಅನರ್ಹತೆ ಕೆಲಸ ಮಾಡಿತ್ತು. ಈ ಬೆಳವಣಿಗೆಯಿಂದ ಸ್ವಪಕ್ಷೀಯರು ಮತ್ತು ಹಿಂದುಳಿದ ವರ್ಗದ ನಾಯಕ ಟಿ.ರಘುಮೂರ್ತಿ ತುಳಿಯಲು ಯತ್ನಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದ್ದವು. ಕಳೆದ ಬಾರಿಯೂ ಸಹ ರಘುಮೂರ್ತಿ ಅವರನ್ನು ಡಿಸಿಸಿ ಬ್ಯಾಂಕ್ ನಿಂದ ದೂರವಿಡಲು ಇಂಥದ್ದೇ ಪ್ರಯತ್ನ ಮಾಡಿದ್ದರು. ಆದರೂ ರಘುಮೂರ್ತಿ ಬ್ಯಾಂಕ್ ನಿರ್ದೇಶಕರಾಗುವಲ್ಲಿ ಯಶಸ್ವಿಯಾಗಿದ್ದರು' ಎಂಬ ಮಾತು ಸಹ ರಾಜಕೀಯ ವಲಯದಲ್ಲಿ ಕೇಳಿ ಬಂದಿತ್ತು.

### ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನಕ್ಕೆ ಪೈಪೋಟಿ ಒಡ್ಡುವ ಆತಂಕಕ್ಕೆ ಅನರ್ಹತೆ ಅಸ್ತ್ರ ಆರೋಪ



ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಎರಡನೇ ಬಾರಿ ಡಿಸಿಸಿ ಬ್ಯಾಂಕ್ ಪ್ರವೇಶಿಸಿ ಅಧ್ಯಕ್ಷ ಸ್ಥಾನಕ್ಕೆ ಪೈಪೋಟಿ ನೀಡಬಹುದು ಎಂಬ ಕಾರಣಕ್ಕೆ ಸಚಿವ ಸುಧಾಕರ್ ಅನರ್ಹತೆ ಅಸ್ತ್ರದ ಮೂಲಕ ರಘುಮೂರ್ತಿ ಅವರನ್ನು ನಿರ್ದೇಶಕ ಸ್ಥಾನದಿಂದ ದೂರವಿಡಲು ಷಡ್ಯಂತ್ರ ರೂಪಸಿದ್ದರು ಎಂಬ ಮಾತು ಕೋಟೆ ನಾಡಿನ ರಾಜಕೀಯ ವಲಯದಲ್ಲಿ ಮರ್ದನಿಸಿದ್ದವು.

### ಸಿಎಂ ಮತ್ತು ಡಿಸಿಎಂ ಅಂಗಳಕ್ಕೆ ಡಿಸಿಸಿ ಬ್ಯಾಂಕ್ ಚುನಾವಣಾ ಮಾಹಿತಿ

ರಾಜಕೀಯ ವಲಯದಲ್ಲಿ ಸ್ವ ಪಕ್ಷದ ನಾಯಕರಲ್ಲಿ ಇಂತಹ ಬೆಳವಣಿಗೆಯಿಂದ ರಾಜ್ಯ ನಾಯಕರು ಸಹ ಎಂಟ್ರಿಯಾಗಿ ಸ್ವಲ್ಪ ತಿಳಿ ಮಾಡಿದ್ದರು. ಸಿಎಂ ಮತ್ತು ಡಿಸಿಎಂ ಅವರು ಸಹ ಸಚಿವ ಸುಧಾಕರ್ ಅವರಿಗೆ ಕಿವಿ ಮಾತು ಹೇಳಿದ್ದರು. ಮುಡಾ ಹಗರಣದ ನಡುವೆ ಸ್ವಲ್ಪ ತಣ್ಣಗಿದ್ದ ಡಿಸಿಸಿ ಬ್ಯಾಂಕ್ ಈಗ ಮರಳಿ ಪಡೆದುಕೊಂಡಿದ್ದು ಸಿಎಂ ಮತ್ತು ಡಿಸಿಎಂ ಸಚಿವ ಡಿ.ಸುಧಾಕರ್ ಶಿಷ್ಯನ ಡಿಸಿಸಿ ಬ್ಯಾಂಕ್ ನಾಮ ನಿರ್ದೇಶನ ಸ್ಥಾನ ರದ್ದುಗೊಳಿಸಿ ಪಕ್ಷ ನಿಷ್ಠೆ, ಸ್ವಾಮಿ ನಿಷ್ಠೆ, ಸಂಘಟನೆ ಚತುರ, ಪಕ್ಷದ ಶಿಸ್ತಿನ ಸಿಪಾಯಿಯಂತೆ ಕೆಲಸ ಮಾಡುವ ಶಾಸಕ ಟಿ.ರಘುಮೂರ್ತಿ ಅವರನ್ನು ಸರ್ಕಾರದಿಂದ ಡಿಸಿಸಿ ಬ್ಯಾಂಕ್ ಗೆ ನಾಮನಿರ್ದೇಶನ ಮಾಡಿ ಸಹಕಾರ ಇಲಾಖೆ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದಾರೆ. ಈ ಮೂಲಕ ಕೋಟೆ ನಾಡಿನಲ್ಲಿ ಹೊಸ ರಾಜಕೀಯಕ್ಕೆ ನಾಂದಿಯಾಡಿದೆ.

## ಜಿಲ್ಲಾ ಪಂಚಾಯಿತಿಯಲ್ಲಿ ಸಂವಿಧಾನ ದಿನ ಆಚರಣೆ



» ಚಿತ್ರದುರ್ಗ

ಜಿಲ್ಲಾಪಂಚಾಯಿತಿಸಭಾಂಗಣದಲ್ಲಿಮಂಗಳವಾರ ಸಂವಿಧಾನ ದಿನ ಆಚರಿಸಲಾಯಿತು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಜಿಲ್ಲಾ ಪಂಚಾಯಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಸಂವಿಧಾನ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ಸಿ.ಎನ್. ಗಾಯತ್ರಿ, ಮುಖ್ಯ ಲೆಕ್ಕಾಧಿಕಾರಿ ಮಧು, ಸಹಾಯಕ ಕಾರ್ಯದರ್ಶಿ ರವಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್ ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು, ಜಿಪಂ ಸಿಬ್ಬಂದಿ ಇದ್ದರು.

### ಸಂವಿಧಾನ ದಿನ ಆಚರಣೆ



ಚಿತ್ರದುರ್ಗ: ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸಂವಿಧಾನ ದಿನ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ಇದೇ ವೇಳೆ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಭೂದಾಖಲೆಗಳ ಉಪನಿರ್ದೇಶಕ ರಾಮಾಂಜನೇಯ, ಜಿಲ್ಲಾಧಿಕಾರಿಗಳ ಕಚೇರಿ ಪತ್ರಾಂಕಿತ ಕಚೇರಿ ಸಹಾಯಕ ಸಿದ್ದೇಶ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

## ಪ್ರಮುಖ ಸುದ್ದಿ

### ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಹೇಳಿಕೆ

# ಪಠ್ಯೇತರ ಚಟುವಟಿಕೆಯಿಂದ ಮಕ್ಕಳ ಸೃಜನಶೀಲತೆ ಹೆಚ್ಚಳ

» ಚಿತ್ರದುರ್ಗ

ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಸೃಜನಾತ್ಮಕತೆ ಹಾಗೂ ಜ್ಞಾನಾಭಿವೃದ್ಧಿಯಾಗುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಬಾಲಭವನ ಸಮಿತಿ ಅಧ್ಯಕ್ಷರಾದ ಎಸ್. ಜೆ.ಸೋಮಶೇಖರ್ ಹೇಳಿದರು.

ಜಿಲ್ಲಾ ಬಾಲಭವನದಲ್ಲಿ ಮಂಗಳವಾರ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಕಲಾಶ್ರೀ ಸ್ಪರ್ಧೆಯಲ್ಲಿ ಭಾಗವಹಿಸುವ ಸಲುವಾಗಿ ಜಿಲ್ಲಾಮಟ್ಟದ ಆಯ್ಕೆ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.ಜಿಲ್ಲಾ ಬಾಲ ಭವನ ಸಮಿತಿ ವತಿಯಿಂದ ಮಕ್ಕಳಿಗೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು. ಮುಂದಿನ ದಿನಗಳಲ್ಲಿ ಪೊಷಕರು ಮತ್ತು ಶಿಕ್ಷಕರಿಗೂ ವಿಶೇಷ ಸ್ಪರ್ಧೆಗಳನ್ನು ಸಹ ಹಮ್ಮಿಕೊಳ್ಳಲಾಗುತ್ತದೆ. ಶಾಸ್ತ್ರೀಯ ನೃತ್ಯಗಳಿಗೆ ಮಕ್ಕಳ ತಯಾರಿ ಮಾಡಿಕೊಳ್ಳುವುದು ಬಹಳ ಕಷ್ಟಕರ. ಆದ್ದರಿಂದ ತೀರ್ಪುಗಾರರು ಅರ್ಹ ಸ್ಪರ್ಧಾಳುಗಳನ್ನುಆಯ್ಕೆಮಾಡಿಕೊಳ್ಳಬೇಕು ಎಂದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಅರ್ ಬಣಕಾರ್ ಮಾತನಾಡಿ, ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ ಹಾಗೂ ರಾಜ್ಯಮಟ್ಟದ ಕಲಾ ಸ್ಪರ್ಧೆಗೆ ಭಾಗವಹಿಸುವ ಮಕ್ಕಳನ್ನು ಆಯ್ಕೆ ಮಾಡುವ ಸಲುವಾಗಿ 9 ರಿಂದ 16 ವರ್ಷದ ಮಕ್ಕಳಿಗೆ ನಾಲ್ಕು ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದು, ಒಟ್ಟು 90 ಸ್ಪರ್ಧಿಗಳು ಭಾಗವಹಿಸಿದ್ದು, ಒಂದು ಸ್ಪರ್ಧೆಯಿಂದ ಇಬ್ಬರು ಮಕ್ಕಳಂತೆ ಒಟ್ಟು ಎಂಟು ಮಕ್ಕಳನ್ನು ಆಯ್ಕೆ ಮಾಡಿ ರಾಜ್ಯಮಟ್ಟದಲ್ಲಿ ನಡೆಯುವ ಕಲಾಶ್ರೀ ಕಾರ್ಯಕ್ರಮಕ್ಕೆ ಸಿಬ್ಬಂದಿಯೊಂದಿಗೆ ಕಳಿಸಲಾಗುವುದು ಎಂದರು.ಕಾರ್ಯಕ್ರಮದ ಉದ್ಘಾಟನೆ ನಂತರ ಸಂವಿಧಾನದ ಪೀಠಿಕೆಯನ್ನು ವಾಚಿಸಲಾಯಿತು. ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ವೆಂಕಟೇಶ್, ಜಿಲ್ಲಾ ನಿರೂಪಣಾಧಿಕಾರಿ ವಿಜಯಕುಮಾರ್, ಜಿಲ್ಲಾ ವಿಕಲಚೇತನ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಮಹಿಳಾ,ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳಾದ ಎನ್.ಸುಧಾ, ವೀಣಾ, ವ್ಯವಸ್ಥಾಪಕ ಸುರೇಶ್ ಇದ್ದರು.



## ಫಾಸ್ಟ್ ನ್ಯೂಸ್

### ಉದ್ಯೋಗ ಖಾತರಿಯಡಿ ಹಣ್ಣು, ಹೂ ಬೆಳೆಯಲು ಅರ್ಜಿ ಆಹ್ವಾನ

» ದಾವಣಗೆರೆ

ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳಾದ ಅಡಿಕೆ, ತೆಂಗು, ಮಾವು, ಸಪೋಟ, ಸೀಬೆ, ನೇರಳೆ, ವಿಳ್ಯದೇಲೆ, ಅಂಗಾಂಶ ಬಾಳೆ, ಡ್ರಾಗನ್ ಫ್ರೂಟ್. ಮಲ್ಲಿಗೆ, ಗುಲಾಭಿ ಮತ್ತು ಬದುಗಳಲ್ಲಿ ತೆಂಗು ಇತ್ಯಾದಿ ಬೆಳೆಗಳನ್ನು ಬೆಳೆಯಲು ಇಚ್ಚಿಸುವ ಸಣ್ಣ ಅತೀ ಸಣ್ಣ ರೈತರು ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ರೈತರು ಪಹಣಿ, ಆಧಾರ್, ಉದ್ಯೋಗ ಚೀಟಿ, ಸಣ್ಣ ಮತ್ತು ಅತೀ ಸಣ್ಣ ರೈತರ ಪ್ರಮಾಣ ಪತ್ರ, ಪರಿಶಿಷ್ಟ ಜಾತಿ, ಪಂಗಡದವರಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರದೊಂದಿಗೆ ಸಂಬಂದಪಟ್ಟ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ ಹೊನ್ನಾಳಿ ಅಥವಾ ಹೋಬಳಿ ಮಟ್ಟದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ತಿಳಿಸಿದ್ದಾರೆ.

### ಬಾಪೂಜಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಂವಿಧಾನ ಅಂಗೀಕಾರದ ಅಮೃತ ಮಹೋತ್ಸವ ಆಚರಣೆ.

» ಚಳ್ಳಕೆರೆ

ರಾಷ್ಟ್ರದ ಸರ್ವತೋಮುಖ ಅಭಿವೃದ್ಧಿ ಹಾಗೂ ಉತ್ತಮ ಆಡಳಿತ ನೀಡಲು ನಾವು ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನವನ್ನು ಸಮರ್ಪಿಸಿಕೊಂಡು ಇಂದಿಗೆ 75 ವರ್ಷ ಸಂದಿದ್ದು, ನಾವೆಲ್ಲರೂ ಸಂವಿಧಾನದ ಸಿದ್ಧಾಂತಗಳನ್ನು ಪಾಲಿಸುವತ್ತ ಗಮನ ನೀಡಬೇಕೆಂದು ಬಾಪೂಜಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ.ಓ.ಬಾಬುಕುಮಾರ್ ತಿಳಿಸಿದರು. ಅವರು, ಮಂಗಳವಾರ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಬೋಧಕ ವರ್ಗಕ್ಕೆ ಸಂವಿಧಾನದ ಕರಡುಪ್ರತಿ ವಾಚಿಸಿಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಕನ್ನಡ ಪ್ರಾಧ್ಯಾಪಕ ಡಾ.ಜಿ.ವಿ.ರಾಜಣ್ಣ, ಎಚ್.ಆರ್.ಮುಜೀಬುಲ್ಲಾ, ಭಾಗ್ಯಲಕ್ಷ್ಮಿ, ಮಾರುತಿ, ರಮೇಶ್, ಕೆಂಚಪ್ಪ, ಮಮತಾ, ಪ್ರೇಮ, ರಚಿತಾ ಮುಂತಾದವರು ಉಪಸ್ಥಿತರಿದ್ದರು.

### ಮತದಾರರ ಸಾಕ್ಷರತಾ ಕ್ಲಬ್ ಉದ್ಘಾಟನೆ



» ಚಳ್ಳಕೆರೆ

ಮತದಾನ ನಮಗೆ ನಮ್ಮ ಸಂವಿಧಾನ ನೀಡಿದ ಪವಿತ್ರವಾದ ಹಕ್ಕಾಗಿದೆ. ನಮ್ಮೆಲ್ಲರ ಹಕ್ಕು ಮತ್ತು ಕರ್ತವ್ಯಗಳನ್ನು ನಮ್ಮ ಸಂವಿಧಾನ ನಿಯಂತ್ರಿಸುತ್ತದೆ. ವಿಶೇಷವೆಂದರೆ ನಾವೆಲ್ಲರೂ ಇಂದು ಸಂವಿಧಾನ ಅಂಗೀಕಾರಗೊಂಡ ಅಮೃತಮಹೋತ್ಸವ ಸಂಭ್ರದಲ್ಲಿದ್ದೇವೆ. ಸಂವಿಧಾನ ನಮ್ಮೆಲ್ಲರಿಗೂ ರಕ್ಷಕವಚವಾಗಿದೆ, ನಮ್ಮನ್ನಾಳುವ ಸರ್ಕಾರ ಮತ್ತು ಜನಪ್ರತಿನಿಧಿಗಳನ್ನು ಮತದಾನದ ಮೂಲಕ ಆಯ್ಕೆ ಮಾಡುವ ಹಕ್ಕನ್ನು ಸಂವಿಧಾನ ನೀಡಿದೆ ಎಂದು ಜಿಲ್ಲಾ ಉಪನ್ಯಾಸಕ ಸಂಘದ ಮಾಜಿ ಅಧ್ಯಕ್ಷ ಎಸ್.ಲಕ್ಷ್ಮಣ್ ತಿಳಿಸಿದರು. ಅವರು, ಮಂಗಳವಾರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಮತದಾರರ ಸಾಕ್ಷರತಾಕ್ಲಬ್‌ನ್ನು ಉದ್ಘಾಟಿಸಿ ಮಾತನಾಡಿದರು. ಮತದಾನ ಮಾಡುವ ಹಕ್ಕು ನಮಗೆ 18ವರ್ಷ ತುಂಬಿದ ಕೂಡಲೇ ಬರಲಿದೆ. ಸಂವಿಧಾನ ನಮಗೆ ಎಲ್ಲಾ ರೀತಿಯ ಸೌಲಭ್ಯವನ್ನು ನೀಡುತ್ತಾ ಬಂದಿದೆ. ಪ್ರಜಾಪ್ರಭುತ್ವದ ಬಹುದೊಡ್ಡ ಅಂಗ ಸಂವಿಧಾನವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಉಪನ್ಯಾಸಕ ಕೆ.ಎನ್.ವಂಸತಕುಮಾರ್ ಮಾತನಾಡಿ, ಸಾಕ್ಷರತಾ ಕ್ಲಬ್‌ಮೂಲಕ ಮತದಾನ ಜಾಗೃತಿಯನ್ನು ಸಹ ಹಮ್ಮಿಕೊಂಡಿದೆ. ನಮಗೆ ಸಂವಿಧಾನ ನೀಡಿದ ಮತದಾನದ ಹಕ್ಕನ್ನು ನಾವೆಲ್ಲರೂಜವಾಬ್ದಾರಿಯುತವಾಗಿಸದುಪಯೋಗ ಪಡಿಸಿಕೊಳ್ಳಬೇಕು. ಯಾವುದೇ ಸಂದರ್ಭದಲ್ಲೂ ಮತದಾನದಿಂದ ವಂಚಿತರಾಗದಂತೆ ಪ್ರತಿಯೊಬ್ಬರೂ ಎಚ್ಚರಿಕೆ ವಹಿಸಬೇಕು ಎಂದರು. ಇದೇ ಸಂದರ್ಭದಲ್ಲಿ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಪ್ರಥಮಸ್ಥಾನ ಪಡೆದ ಕಾಲೇಜಿನ ಚಿತ್ತಾರತೇಜಸ್ವಿನಿ, ದ್ವಿತೀಯ ಸ್ಥಾನ ರಾಮಜೋಗಿಹಳ್ಳಿ ಕಾಲೇಜಿನ ಭವ್ಯರಾಧಿಕ, ಪ್ರಬಂಧಸ್ಪರ್ಧೆಯಲ್ಲಿ ಗಿರಿಯಮ್ಮಕಾಲೇಜಿನ ಶ್ರುತಿ, ಜಾನವಿ, ಅಶ್ವಿನಿ, ಬಿತ್ತಿಪತ್ರ ಸ್ಪರ್ಧೆಯಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜಿನ ಷಣ್ಮುಖಕುಮಾರ್‌ಧೋನಿ, ದ್ವಿತೀಯ ಸ್ಥಾನ ತಳಕು ಎಸ್‌ಜಿಟಿಕಾಲೇಜಿನ ಭಾವನರವರನ್ನು ಅಭಿನಂದಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಸಾಕ್ಷರತಾಕ್ಲಬ್ ನೋಡಲ್ ಅಧಿಕಾರಿ ಎಚ್.ಆರ್.ಜಬೀವುಲ್ಲಾ, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಉಪನ್ಯಾಸಕರಾದ ಹಭಿಬುಲ್ಲಾ, ನಾಗರಾಜ್‌ಬೆಳಗಟ್ಟ, ಜಾನಕಮ್ಮ, ಶ್ರೀಮಂತ್, ಚಂದ್ರಣ್ಣ, ಕರಿಯಪ್ಪ, ಲೋಕೇಶ್, ವೀರೇಶ್, ಶೈಲಜಾ, ಭಾರತಿ ಉಪಸ್ಥಿತರಿದ್ದರು.

# ಸಂಪೂರ್ಣ ಮಾಹಿತಿಯೊಂದಿಗೆ ಸಭೆಗೆ ಬನ್ನಿ



» ಚಳ್ಳಕೆರೆ

ಪ್ರಗತಿಪರಿಶೀಲನಾ ಸಭೆಗೆ ಬರುವ ಅಧಿಕಾರಿಗಳು ಸಂಪೂರ್ಣ ಮಾಹಿತಿಯೊಂದಿಗೆ ಸಭೆ ಬನ್ನಿ. ಕೆಲಸ ಮಾಡದ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಶಾಸಕರು ಸೂಚಿಸಿದ್ದು ಸಿಇಒಗೆ ಶಾಸಕ ಟಿ.ರಘುಮೂರ್ತಿ ಸೂಚನೆ ನೀಡಿದರು.

ಅವರು, ಮಂಗಳವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪ್ರಗತಿಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ಕೃಷಿ ಇಲಾಖೆ ವರದಿ ನೀಡಿದ ಸಹಾಯಕ ನಿರ್ದೇಶಕ ಅಶೋಕ್, ಈ ಬಾರಿ ವಾಡಿಕೆಗಿಂತಹ ಶೇ.58ರಷ್ಟು ಹೆಚ್ಚು ಮಳೆಯಾಗಿದೆ. ತಾಲ್ಲೂಕಿನ ಎಲ್ಲಾ ಹೋಬಳಿ ಕೇಂದ್ರದಲ್ಲಿ ಉತ್ತಮ ಮಳೆಯಾಗಿದೆ. 982 ಹೆಕ್ಟೇರ್ ಪ್ರದೇಶದ ಶೇಂಗಾ ಬೆಳೆ ಮಳೆಯಿಂದ ನಾಶವಾದ ಬಗ್ಗೆ ಸರ್ಕಾರಕ್ಕೆ ವರದಿ ನೀಡಲಾಗಿದೆ ಎಂದರು. ಈ ವೇಳೆ ಶಾಸಕರು ಕಳೆದ ಸೆಪ್ಟಂಬರ್‌ನಿಂದ ಮಳೆ ಬಂದಿದೆ. ಪ್ರಾರಂಭದ ಜೂನ್, ಜುಲೈ ತಿಂಗಳಲ್ಲಿ ರೈತರು ಬಿತ್ತನೆಮಾಡಿದ್ದ ಶೇಂಗಾ ಸಂಪೂರ್ಣ ನಾಶವಾಗಿತ್ತು. ಈ ಬಗ್ಗೆ ವರದಿಯನ್ನು ಪ್ರತ್ಯೇಕವಾಗಿ ಸಿದ್ದಪಡಿಸಿ ಸರ್ಕಾರಕ್ಕೆಕಳಿಸುವಂತೆಸೂಚನೆನೀಡಿದರು. ಕ್ಷೇತ್ರದ ತೊಗರಿಬೆಳೆಗಾರ ಸಂಕಷ್ಟಗಳಿಗೆ ಸ್ಪಂದಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ ಮಾಹಿತಿ ನೀಡಿ, ತಾಲ್ಲೂಕಿನಾದ್ಯಂತ ಒಟ್ಟು 62 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಇವೆ. ಮಳೆ ಅನಾವೃಷ್ಟಿಯಿಂದ 53ಲಕ್ಷ ಮೌಲ್ಯದ ತೋಟಗಾರಿಕೆ ಬೆಳೆನಷ್ಟವಾಗಿದೆ ಎಂದರು. ಪಶುವೈದ್ಯಾಧಿಕಾರಿ ರೇವಣ್ಣ ಮಾಹಿತಿ ನೀಡಿ, ಅನುಗ್ರಹ ಯೋಜನೆಯಲ್ಲಿ 996 ಅರ್ಜಿ ಸಲ್ಲಿಕೆಯಾಗಿವೆ, 606 ಅರ್ಜಿಗಳಿಗೆ ಪರಿಹಾರ ನೀಡಿದ್ದು, 390 ಅರ್ಜಿಗಳಿಗೆ ಪರಿಹಾರ ನೀಡಬೇಕಿದೆ ಎಂದರು. ರೇಷ್ಮೆ ಅಧಿಕಾರಿ ಉಮಾಪತಿ, ಪ್ರಸ್ತುತ ವರ್ಷ ಹೊಸದಾಗಿ 30ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆಬೆಳೆ ಬೆಳೆಯಲಾಗಿದೆ ಎಂದರು.


ಗ್ರಾಮೀಣ ಭಾಗದಲ್ಲಿ ಸೋರುತ್ತಿರುವ ಶಾಲೆಗಳ ಬಗ್ಗೆ ಮಾಹಿತಿ ನೀಡಲಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕರು, ಮುಖ್ಯಮಂತ್ರಿಗಳಿಂದ 8 ಕೋಟಿ, ನನ್ನ ಅನುದಾನದಲ್ಲಿ 16ಕೋಟಿ ಒಟ್ಟು 24 ಕೋಟಿ ಹಣವನ್ನು ಕೆಆರ್‌ಐಡಿಎಲ್, ನಿರ್ಮಿತಿ ಕೇಂದ್ರ, ಲೋಕೋಪಯೋಗಿ, ಜಿಲ್ಲಾ ಪಂಚಾಯಿತಿ ಇಂಜಿನಿಯರಿಂಗ್ ವಿಭಾಗಕ್ಕೆ ನೀಡಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ಸೂಚನೆ ನೀಡಿದರು. ಸಿಡಿಪಿಒ ಹರಿಪ್ರಸಾದ್, 8 ಅಂಗನವಾಡಿ ಕಟ್ಟಡ ಶಿಥಿಲಗೊಂಡಿದ್ದು ಅವುಗಳನ್ನುಬೇರೆಡೆ ಸ್ಥಳಾಂತರ ಮಾಡಲಾಗಿದೆ ಎಂದರು.

ಪ್ರಗತಿಪರಿಶೀಲನಾ ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಾಲ್ಲೂಕುಪಂಚಾಯಿತಿ ಆಡಳಿತಾಧಿಕಾರಿ ಟಿ.ಮಂಜುನಾಥ, ತಹಶೀಲ್ದಾರ್ ರೇಹಾನ್‌ಪಾಷ, ಇಒ ಶಶಿಧರ. ತಾಲ್ಲೂಕು ಮಟ್ಟದ ಅಧಿಕಾರಿಗಳು ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಪಾಲ್ಗೊಂಡಿದ್ದರು.

# ನ.29ರಂದು ಚಿತ್ರಕಲಾ ಪ್ರದರ್ಶನ







■ ಚಿತ್ರದುರ್ಗ

ಕಲಾ ಚೈತನ್ಯ ಸೇವಾ ಸಂಸ್ಥೆ, ಸಾಂಸ್ಕೃತಿಕ ಕಲಾ ಸಂಘ ಚಿತ್ರದುರ್ಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ 69ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಚಿತ್ರಕಲಾ ಪ್ರದರ್ಶನ ಹಾಗೂ ಗಾನ ಮತ್ತು ಚಿತ್ರ ಸಂಗಮ ಕಾರ್ಯಕ್ರಮವನ್ನು ನ. 29ರ ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ 10.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಕಲಾ ಚೈತನ್ಯ ಸೇವಾ ಸಂಸ್ಥೆಯ ಕಾರ್ಯದರ್ಶಿ ನಾಗರಾಜ್ ಬೇದ್ರೇ ತಿಳಿಸಿದ್ದಾರೆ.

ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್ ಉದ್ಘಾಟಿಸಲಿದ್ದಾರೆ. ಜಿಲ್ಲಾಧಿಕಾರಿಗಳಾದ ಟಿ.ವೆಂಕಟೇಶ್, ವೈದ್ಯರಾದ ಡಾ.ಬಿ.ಮಲ್ಲಿಕಾರ್ಜುನ್ ಕೀರ್ತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಎಸ್.ಕೆ.ಮಲ್ಲಿಕಾರ್ಜುನ್, ಶರಣ ಸಾಹಿತ್ಯ ಪರಿಷತ್ನ ರಾಜ್ಯ ಉಪಾಧ್ಯಕ್ಷರಾದ ಡಾ.ಕೆ.ಎಂ.ವಿರೇಶ್ ಚಿತ್ರಕಲಾದರಾದ ಎಸ್.ಸತೀಶ್ರಾವ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ದಿನೇಶ್ ಗೌಡಗೆರೆ, ರಾಜ್ಯ ಲಲಿತಾ ಕಲಾ ಆಕಾಡೆಮಿಯ ಸದಸ್ಯರಾದ ಸಿ.ಕಣ್ಮೇಶ್ ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಚಿತ್ರಕಲಾವಿದರಾದ ಚಿತ್ರದುರ್ಗದ ನಾಗರಾಜ್ ಬೇದ್ರೇ, ನವೀನ್ ಬೇದ್ರೇ, ಅಮೂಲ್ಯ, ಜವಳಿ ಶಾಂತಕುಮಾರ್, ಮಾರುತಿ, ಪ್ರಜ್ಞಾ ಮಂಜುನಾಥ್ ಹಾಗೂ ಹಿರಿಯೂರಿನ ಸುಷ್ಮಾ ರವರ ಚಿತ್ರಕಲಾಗಳ ಪ್ರದರ್ಶನಗೊಳ್ಳಲಿವೆ. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆಯನ್ನು ಮಾಡಿದ ಗಣ್ಯರನ್ನು ಸನ್ಮಾನಿಸ ಲಾಗುವುದು. ಗಾನ ಮತ್ತು ಚಿತ್ರ ಸಂಗಮ ಕಾರ್ಯಕ್ರಮವನ್ನು ಚಿತ್ರಕಲಾವಿದರಾದ ಎಸ್.ಸತೀಶ್ ರಾವ್ ಹಾಗೂ ಸಂಗೀತ ಶಿಕ್ಷಕರಾದ ಅಂಜನಿ ಯವರು ನಡೆಸಿಕೊಡಲಿದ್ದಾರೆ.

ಸಂಜೆ 4.30ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ವಾಣಿಜ್ಯೋದ್ಯಮಿಗಳಾದ ಜಿ.ಎಸ್. ಅನಿತ್ ಕುಮಾರ್, ಇಕ್ಬಾಲ್ ಹುಸೇನ್, ಉತ್ತಮ ಚಂದ್ ಸುರಾನ ಹಾಗೂ ಚಿತ್ರದುರ್ಗ ಟೌನ್ ಕೋ–ಆಪರೇಟಿವ್ ಸೊಸೈಟಿಯ ಅಧ್ಯಕ್ಷರಾದ ನಿಶಾನಿ ಜಯ್ಯಣ್ಣ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ



ಚಳ್ಳಕೆರೆ ನಗರದ ಬಾಪೂಜಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸಂವಿಧಾನ ಪ್ರತಿಜ್ಞಾವಿಧಿ ಬೋಧಿಸಲಾಯಿತು.

## ಭಾರತದ ಭದ್ರ ಬುನಾದಿ ಸಂವಿಧಾನದಲ್ಲಿ ಅಡಗಿದೆ; ಡಿಡಿಪಿಐ



» ಚಿತ್ರದುರ್ಗ

ಬಡತನ, ಜಾತಿಪದ್ಧತಿ, ಆರ್ಥಿಕ ಅಸಮತೋಲನ, ರಾಗ– ದ್ವೇಷಗಳ ಮಧ್ಯೆ ಭಾರತ ಒಗ್ಗಟಿನಲ್ಲಿ ಇರಲು ಮತ್ತು ಸಮಷ್ಟಿಯ ಹಿತ ಕಾಪಾಡುವಲ್ಲಿ ಸಂವಿಧಾನಕ್ಕೆ ಅಗ್ರಮಾನ್ಯ ಸ್ಥಾನ ದೊರಕಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಕವಾಡಿಗರಹಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಕ್ಷೇತ್ರ ಸಮನ್ವಯಾಧಿಕಾರಿ ಇ.ಸಂಪತ್ ಕುಮಾರ್ ಮಾತನಾಡಿ, ಭವ್ಯ ಭಾರತದ ಭದ್ರಬುನಾಧಿ ಸಂವಿಧಾನದಲ್ಲಿ ಅಡಗಿದೆ. ಅದನ್ನು ಪಾಲಿಸಿ ರಕ್ಷಿಸುವ ಜವಾಬ್ದಾರಿ ಶಾಲೆಗಳು ವಿದ್ಯಾರ್ಥಿಗಳಲ್ಲಿ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವಿಕೆ ಹಾಗೂ ವಿಚಾರ ವಿನಿಮಯ ಮಾಡುವ ಮೂಲಕ ಜಾಗೃತಿ ಭಾವ ಮೂಡಿಸುವಂತೆ, ಭವಿಷ್ಯದಲ್ಲಿ ಸಂವಿಧಾನ ಎತ್ತಿಹಿಡಿಯುವ ಕಾರ್ಯ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.ಸಿಆರ್‌ಪಿ ಅಜಯ್ ಕುಮಾರ್ ಮಾತನಾಡಿ, ಮೂಲಭೂತ ಹಕ್ಕು ಹಾಗೂ ಕರ್ತವ್ಯಗಳ ಪಾಲನೆಯಿಂದ ಮಕ್ಕಳು ಕಾನೂನು ಸುವ್ಯವಸ್ಥೆ ಪಾಲನೆಯ ಅಭ್ಯಾಸ ಬೆಳಸಿಕೊಳ್ಳುವುದರೊಂದಿಗೆ ಸಂವಿಧಾನದ ರಚನೆಯ ಮಹತ್ವ ಅರಿತು ವಿದ್ಯಾರ್ಥಿಗಳು ಸಂವಿಧಾನ ಪೀಠಿಕೆ ಪಠಣ ಮಾಡುವಂತೆ ಕಿವಿ ಮಾತು ಹೇಳಿದರು.

ಶಾಲಾ ವಿದ್ಯಾರ್ಥಿಗಳು ಸಂವಿಧಾನ ಪೀಠಿಕೆ ಪಠಣ ಮಾಡಿದರು. ಹಿರಿಯ ವಿದ್ಯಾರ್ಥಿಗಳು ಸಂವಿಧಾನದ ಅಶಯ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳ ಕುರಿತು ಲೇಖನಗಳನ್ನು ಓದಿದರು. ಎಸ್.ಡಿ.ಎಂ.ಸಿ ಸದಸ್ಯರು ಪೋಷಕರು, ಶಿಕ್ಷಕ ವೃಂದ ಈ ಆಚರಣೆಯಲ್ಲಿ ಪಾಲ್ಗೊಂಡಿದ್ದರು.ಶಿಕ್ಷಕರಾದ ತಿಪ್ಪೇಸ್ವಾಮಿ ನಿರೂಪಿಸಿದರು. ಮುಖ್ಯ ಶಿಕ್ಷಕರಾದ ರುದ್ರಮುನಿ ಸ್ವಾಗತಿಸಿದರು. ಶಿಕ್ಷಕಿ ಸರಸ್ವತಿ ವಂದನೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಡಾಬಿ.ಆರ್. ಅಂಬೇಡ್ಕರ್ ಹಾಗೂ ಸಂವಿಧಾನ ಪೀಠಿಕೆಯ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

**ಪ್ರಮುಖ ಸುದ್ದಿ**

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಂವಿಧಾನ ದಿನ ಆಚರಣೆ



» ಚಿತ್ರದುರ್ಗ

ದೇಶ ಸ್ವಾತಂತ್ರಯ ಬಂದಾಗ ಯಾವುದೇ ನೀರಾವರಿಯಾಗಲಿ, ಕೈಗಾರಿಕೆಯಾಗಲಿ ಇರಲಿಲ್ಲ ಇದರ ಬದಲಾಗಿ ಆಹಾರದ ಕೊರತೆ, ಬಡತನ, ನಿರುದ್ಯೋಗ ಇತ್ತು ಇದನ್ನು ಎಲ್ಲಾ ರೀತಿಯಿಂದಲೂ ಧೈರ್ಯವಾಗಿ ಎದುರಿಸಿ ನೀರಾವರಿ ಯೋಜನೆಗಳ ಜಾರಿ, ಕೈಗಾರಿಕೆಗಳ ಸ್ಥಾಪನೆ, ಜನತೆಯ ಆಹಾರ ಸಮಸ್ಯೆ ನಿವಾರಣೆ, ಬಡತನ ನಿರ್ಮೂಲನೆಗೆ ವಿವಿಧ ರೀತಿಯ ಯೋಜನೆಗಳನ್ನು ಜಾರಿ ಮಾಡಿದ್ದು ಕಾಂಗ್ರೆಸ್ ಎಂದು ಗಾಂಧಿವಾದಿ, ರಾಜ್ಯ ಸಭಾದ ಮಾಜಿ ಸದಸ್ಯರಾದ ಹೆಚ್. ಹನುಮಂತಪ್ಪ ತಿಳಿಸಿದರು.

ಚಿತ್ರದುಗ್ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ನಡೆದ ಜಿಲ್ಲಾ ಕಾಂಗ್ರೆಸ್ ಸಮಿತಿ ಮತ್ತು ಕಾನೂನು ಮಾನವ ಹಕ್ಕು ಹಾಗೂ ಮಾಹಿತಿ ಹಕ್ಕು ವಿಭಾಗದವತಿಯಿಂದ ಹಮ್ಮಿಕೊಂಡಿದ್ದ 75ನೇ ವರ್ಷದ ಸಂವಿಧಾನ ದಿನಾಚರಣೆಯ ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಸಂವಿಧಾನವನ್ನು ರಚನೆ ಮಾಡಿದ ಅಂಬೇಡ್ಕರ್ ರವರು ಸತತವಾಗಿ ಎರಡು ವರ್ಷಗಳ ಕಾಲ ಅದನ್ನು ಸರಿಯಾದ ರೀತಿಯಲ್ಲಿ ಅಭ್ಯಾಸವನ್ನು ಮಾಡುವುದರ ಮೂಲಕ ದೇಶಕ್ಕೆ ಉತ್ತಮವಾದ ಸಂವಿಧಾನವನ್ನು ನೀಡಿದ್ದಾರೆ. ಇದರ ಪ್ರಯೋಜನ ದೇಶದ ಎಲ್ಲಾ ಪ್ರಜೆಗಳಿಗೆ ಆಗಬೇಕಿದೆ. ಆದರೆ ಇಂದು ಅಧಿಕಾರವನ್ನು ಮಾಡುತ್ತಿರುವವರ ಸಂವಿಧಾನದ ಮೇಲೆ ಪ್ರತಿಜ್ಞೆಯನ್ನು ಮಾಡಿ ಲೋಕಸಭೆಗೆ ಹೋಗುವಮುನ್ನಾಅದಕ್ಕೆನಮಸ್ಕಾರಮಾಡಿ ತದ ನಂತರ ಸಂವಿಧಾನ ಬದಲಾವಣೆಯ ಬಗ್ಗೆ ಮಾತನಾಡುತ್ತಿರುವುದು ದುರಂತದ ವಿಷಯವಾಗಿದೆ ಎಂದರು.

ಕಾಂಗ್ರೆಸ್ ಎನ್ನುವುದೇ ಒಂದು ಶಕ್ತಿಯಾಗಿದೆ, ಇಲ್ಲಿ ಸದಸ್ಯರಾಗಿ ಇರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ, ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮೂಲಕ ಲಕ್ಷಾಂತರ ಜನ ಭಾಗಿಯಾಗುವುದು ಮೂಲಕ ದೇಶವನ್ನು ಬ್ರಿಟಿಷರ ದಾಸ್ಯದಿಂದ ಬಿಡುಗಡೆ ಮಾಡಿಸಿದರು. ದೇಶ ಸ್ವಾತಂತ್ರ್ಯಗೊಂಡ ಬಗ್ಗೆ ಇಂದಿನ ಯುವ ಪೀಳಿಗೆಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ. ನೀವುಗಳೆಲ್ಲಾ ಸ್ವಾತಂತ್ರ್ಯ ಪ್ರಜೆಗಳು ಆದರೆ ನಾನು ಬ್ರಿಟಿಷರ ಕಾಲದಲ್ಲಿ ಜನನವಾದ ಹಿನ್ನಲೆಯಲ್ಲಿ ಜೀತದಾಳಾಗಿದ್ದೇನೆ. ಸಂವಿಧಾನದ ಬಗ್ಗೆ ಬೇರೆ ಪಕ್ಷದವರು ವಿರುದ್ದವಾಗಿ ಮಾತನಾಡುತ್ತಿದ್ದರು ಕಾಂಗ್ರೆಸ್ ಇದರ ಬಗ್ಗೆ ಮಾತನಾಡುತ್ತಿಲ್ಲ, ಇದು ನಮ್ಮ ದುರಂತ. ಎಂದು ತಿಳಿಸಿದ ಅವರು, ಕಾಂಗ್ರೆಸ್ ಒಂದು ಶಕ್ತಿಯಾಗಿದೆ. ಇದರಲ್ಲಿ ಇರುವವರು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕಿದೆ. ಸಂವಿಧಾನದ ಬಗ್ಗೆ ಮಾತನಾಡುವವರಿಗೆ ಸರಿಯಾದ ಉತ್ತರವನ್ನು ನೀಡಬೇಕಿದೆ ಎಂದು ಹನುಮಂತಪ್ಪ ತಾಕೀತು ಮಾಡಿದರು.

ಸರ್ಕಾರದ ಗ್ಯಾರೆಂಟಿ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಶಿವಣ್ಣ ಮಾತನಾಡಿ, ಸಂವಿಧಾನದ ಬಗ್ಗೆ ಇಂದಿನ ಯುವ ಪೀಳಿಗೆಗೆ ತಿಳಿಸುವಂತ ಕಾರ್ಯವನ್ನು ಕಾಂಗ್ರೆಸ್‌ವತಿಯಿಂದ ಮಾಡಬೇಕಿದೆ. ದೇಶ ಯಾವ ರೀತಿ ಸ್ವಾತಂತ್ರಯಗೊಂಡಿತು ಎಂಬುದರ ಬಗ್ಗೆ ಯುವಜನತೆಗೆ ತಿಳಿದಿಲ್ಲ ಇದನ್ನು ತಿಳಿಸುವ ಕಾರ್ಯವಾಗಬೇಕಿದೆ. ಇಂದಿನ ದಿನಮಾನದಲ್ಲಿ ಸಂವಿಧಾನವನ್ನು ಅಸ್ಥಿರಗೊಳಿಸುವ ಕಾರ್ಯ ನಡೆಯುತ್ತಿದೆ ಇದರ ಬಗ್ಗೆ ಎಲ್ಲರು ಎಚ್ಚರವಾಗಿರಬೇಕಿದೆ. ಸಂವಿಧಾನ ಎಲ್ಲರಿಗೂ ಸಹಾ ಬದುಕುವ ಹಕ್ಕನ್ನು ನೀಡಿದೆ. ಸಂವಿಧಾನ ಉಳಿವಿಗಾಗಿ ಎಲ್ಲರ ಪಣ ತೊಡಬೇಕಿದೆ ಎಂದರು.

ಕಾನೂನು ಮಾನವ ಹಕ್ಕು ಹಾಗೂ ಮಾಹಿತಿ ಹಕ್ಕು ವಿಭಾಗದ ಅಧ್ಯಕ್ಷರಾದ ಸುದರ್ಶನ ಮಾತನಾಡಿ, ಸಂವಿಧಾನ ಎಲ್ಲರಿಗೂ ಜೀವಿಸುವ ಹಕ್ಕನ್ನು ನೀಡಿದೆ, ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳನ್ನು ಸಂವಿಧಾನ ನೀಡಿದೆ. ಆದರೆ ಇಂದಿನ ಸರ್ಕಾರಗಳು ಸಂವಿಧಾನದ ನಿಯಮಗಳನ್ನು ಸರಿಯಾದ ರೀತಿಯಾದ ಪಾಲಿಸುತ್ತಿಲ್ಲ, ಇದರ ಬಗ್ಗೆ ಎಲ್ಲರಿಗೂ ತಿಳಿಸುವ ಕಾರ್ಯವಾಗಬೇಕಿದೆ. ಕೆಲವೊಂದು ಪಟ್ಟಭದ್ರಾ ಹಿತಾಸಕ್ತಿಗಳು ಸಂವಿಧಾನವನ್ನು ಅಸ್ಥಿರಗೊಳಿಸಲು ಮುಂದಾಗಿದೆ. ಸಂವಿಧಾನ ಎಂದು ಸಹಾ ಸುಭದ್ರವಾಗಿರುತ್ತದೆ ಇದನ್ನು ಯಾರಿಂದಲೂ ಸಹಾ ಅಳಿಸಲು ಸಾಧ್ಯವಿಲ್ಲ ಎಂದರು.

ಜಿಲ್ಲಾ ಕಾಂಗ್ರೆಸ್‌ನ ಕಾನೂನು ಘಟಕದ ಅಧ್ಯಕ್ಷರಾದ ಶಶಾಂಕ ಮಾತನಾಡಿ, ಅಂಬೇಡ್ಕರ್ ರವರು ಸತತವಾದ ಪರಿಶ್ರಮದಿಂದ ನಮಗೆ ಉತ್ತಮವಾದ ಸಂವಿಧಾನವನ್ನು ನೀಡಿದ್ದಾರೆ, ಇದರ ಸದುಪಯೋಗವನ್ನು ಎಲ್ಲರು ಪಡೆಯಬೇಕಿದೆ, ಇದು ಎಲ್ಲರಿಗೂ ಸಹಾ ಗ್ರಂಥ ಇದ್ದಂತೆ ಇದರಲ್ಲಿ ಆಶಯಗಳು ಎಲ್ಲರಿಗೂ ತಲುಪುವಂತಾಗಬೇಕಿದೆ ಎಂದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ತಾಜ್‌ಪೀರ್ ವಹಿಸಿದ್ದರು. ಒಬಿಸಿ ಅಧ್ಯಕ್ಷರಾದ ಎನ್.ಡಿ.ಕುಮಾರ್, ಜಿಲ್ಲಾ ಕಾರ್ಯದರ್ಶಿ ಮೈಲಾರಪ್ಪ, ಜಮೀರ್ ಆಹ್ಮದ್, ರವಿಕುಮಾರ್, ಗಂಗಾಧರಪ್ಪ, ರಾಜಪ್ಪ, ಚಿದಾನಂದ ಮೂರ್ತಿ, ಬಿಸನ್ನಹಳ್ಳಿ ಜಯ್ಯಪ್ಪ, ಚಂದ್ರಣ್ಣ, ಮುದಾಸಿರ್ ನವಾಜ್, ಲಕ್ಷ್ಮೀಕಾಂತ್, ಖಾಸಿಂಆಲಿ, ಸ್ವಾಮಿ, ತಕ್ಕಡಿ ಸುರೇಶ್, ಕಲಿಂವುಲ್ಲಾ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಸಂವಿಧಾನದಡಿ ಎಲ್ಲರಿಗೂ ಉನ್ನತ ಹುದ್ದೆ ಅಲಂಕರಿಸಲು ಅವಕಾಶ ಇದೆ

» ದಾವಣಗೆರೆ

ಪ್ರತಿಯೊಬ್ಬ ಭಾರತೀಯ ಪ್ರಜೆಗೂ ಈ ದೇಶದ ಪ್ರಧಾನಿ, ರಾಷ್ಟ್ರಪತಿ, ಉಪರಾಷ್ಟ್ರಪತಿ, ರಾಜ್ಯಪಾಲರಂತಹ ಉನ್ನತ ಸ್ಥಾನಗಳನ್ನು ಅಲಂಕರಿಸಲು ಅವಕಾಶ ಇದೆ ಎಂದು ಸಂಯೋಜಿತ ಪ್ರಾದೇಶಿಕ ಕೇಂದ್ರ ನಿರ್ದೇಶಕರಾದ ಮೀನಾಕ್ಷಿ ತಿಳಿಸಿದರು.ಮಂಗಳವಾರ(26) ರಂದು ಸಂಯೋಜಿತ ಪ್ರಾದೇಶಿಕ ಕೇಂದ್ರ, ದಾವಣಗೆರೆ ರಾಷ್ಟ್ರೀಯ ಬೌದ್ಧಿಕ ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಸಂಸ್ಥೆಯಲ್ಲಿ ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ (ದಿವ್ಯಾಂಗಜನ್), ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಸಹಯೋಗದಲ್ಲಿ 75 ನೇ ವರ್ಷದ ಸಂವಿಧಾನದ ದಿನದ ಅಂಗವಾಗಿ ನಮ್ಮ ಸಂವಿಧಾನ, ನಮ್ಮ ಸ್ವಾಭಿಮಾನ ಎಂಬ ವಿಷಯದೊಂದಿಗೆ ಸಂವಿಧಾನದ ದಿನಾಚರಣೆ ಅಂಗವಾಗಿ ಏರ್ಪಡಿಸಲಾದ ಕಾರ್ಯಕ್ರಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತಾನಾಡಿದರು. ಭಾರತೀಯ ಸಂವಿಧಾನದಲ್ಲಿ ಅಂಗವಿಕಲರಿಗೆ ಹಕ್ಕುಗಳನ್ನು ಕಲ್ಪಿಸಲಾಗಿದೆ. ಜಾತಿ, ಮತ, ಧರ್ಮದ ಹೊರತಾಗಿ ಪ್ರತಿಯೊಬ್ಬ ಭಾರತೀಯ ಪ್ರಜೆಗೂ ಈ ದೇಶದ ಪ್ರಧಾನಿ, ರಾಷ್ಟ್ರಪತಿ, ಉಪರಾಷ್ಟ್ರಪತಿ, ರಾಜ್ಯಪಾಲರಂತಹ ಉನ್ನತ ಸ್ಥಾನಗಳನ್ನು ತಲುಪಲು ಅವಕಾಶವಿದೆ. ಈ ಕೀರ್ತಿ ನಮ್ಮ ಭಾರತೀಯ ಸಂವಿಧಾನಕ್ಕೆ ಮಾತ್ರ ಸಲ್ಲುತ್ತದೆ. ನಮ್ಮ ಸಂವಿಧಾನದ ಕಾರಣದಿಂದಾಗಿ ಭಾರತವು ವೈವಿಧ್ಯತೆಯಲ್ಲಿ ಏಕತೆ ಇದೆ, ಈ ದೇಶದ ಎಲ್ಲಾ ಜನರನ್ನು ಸಂಪರ್ಕಿಸಲು ಸಾಧ್ಯ ಎಂದರು. ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲರಾದ ರೇಖಾ ಜೋಶಿ ಅವರು ಭಾರತೀಯ ಸಂವಿಧಾನದ ಕುರಿತು ಉಪನ್ಯಾಸ ನೀಡಿದರು. ಸಂಯೋಜಕರಾದ ವೈ.ಶ್ರೀನಾಥ್, ಸಿಆರ್‌ಸಿ ಸಿಬ್ಬಂದಿ, ವಿದ್ಯಾರ್ಥಿಗಳು, ಅಂಗವಿಕಲರು, ಪಾಲಕರು ಸುಮಾರು 100 ಮಂದಿ ಭಾಗವಹಿಸಿದ್ದರು.,

### ಎಪಿಎಂಸಿಯಲ್ಲಿ ಇ-ಟೆಂಡರ್, ರೈತರಿಗೆ ವರದಾನ

» ದಾವಣಗೆರೆ

ದಾವಣಗೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಕ್ಕೆ ಬರುವ ಕೃಷಿ ಹುಟ್ಟುವಳಿಗಳಾದ ಮೆಕ್ಕೆಜೋಳ, ರಾಗಿ, ಹತ್ತಿ, ತೊಗರಿ, ಅಡಿಕೆ, ಸೂರ್ಯಕಾಂತಿ, ಶೇಂಗಾ ಉತ್ಪನ್ನಗಳಿಗೆ ಈಗಾಗಲೇ ಇ-ಟೆಂಡರ್ ವ್ಯವಸ್ಥೆ ಜಾರಿ ಮಾಡಲಾಗಿದೆ. ನವಂಬರ್ 25 ರಿಂದ ಭತ್ತ ಉತ್ಪನ್ನವನ್ನೂ ಸಹ ಇ-ಟೆಂಡರ್ ವ್ಯವಸ್ಥೆಯಲ್ಲಿ ಜಾರಿಗೊಳಿಸಿದ್ದು, ಇದರಿಂದ ರೈತರ ಬೆಳೆಗಳಿಗೆ ಸ್ಪರ್ಧಾತ್ಮಕ ಬೆಲೆಯು ಸಿಗುತ್ತಿರುವುದರಿಂದ ಜಿಲ್ಲೆಯ ರೈತರು ತಾವು ಬೆಳೆದ ಭತ್ತ ಉತ್ಪನ್ನವನ್ನು ಒಣಗಿಸಿ, ಸ್ವಚ್ಛಗೊಳಿಸಿ ದಾವಣಗೆರೆಯ ಎಪಿಎಂಸಿ ಪ್ರಾಂಗಣಕ್ಕೆ ತಂದು ಇ-ಟೆಂಡರ್ ಮೂಲಕ ಮಾರಾಟ ಮಾಡಿ ಸ್ಪರ್ಧಾತ್ಮಕ ಬೆಲೆಯನ್ನು ಪಡೆದುಕೊಳ್ಳಲು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ತಿಳಿಸಿದ್ದಾರೆ.

### ಈರುಳ್ಳಿ ವಿಮಾ ನೊಂದಣಿ ಆರಂಭ

» ಚಿತ್ರದುರ್ಗ

2024-25ನೇ ಸಾಲಿನ ಹಿಂಗಾರು ಹಂಗಾಮಿನ ಈರುಳ್ಳಿ ನೀರಾವರಿ ಬೆಳೆಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಬೆಳೆ ವಿಮೆ ನೊಂದಣಿ ಪ್ರಾರಂಭವಾಗಿದೆ. ಚಿತ್ರದುರ್ಗ ತಾಲ್ಲೂಕು ಕಸಬಾ ಹಾಗೂ ತುರುವನೂರು, ಚಳ್ಳಕೆರೆ ತಾಲ್ಲೂಕಿನ ಕಸಬಾ ಹಾಗೂ ತಳಕು, ಹಿರಿಯೂರು ತಾಲ್ಲೂಕಿನ ಐಮಂಗಲ ಹಾಗೂ ಜೆ.ಜಿ.ಹಳ್ಳಿ ಹೋಬಳಿಗೆ ಈರುಳ್ಳಿ ನೀರಾವರಿ ಬೆಳೆಯನ್ನು ಅಧಿಸೂಚಿಸಲಾಗಿದೆ. ಶೇ.90 ಇಡಿಮ್ನಿಟಿ ಮಟ್ಟದ ನೀರಾವರಿ ಈರುಳ್ಳಿ ವಿಮೆ ಮೊತ್ತ ಹೆಕ್ಟೇರ್‌ಗೆ ರೂ.80500 ಇದ್ದು, ಇದರ ಶೇ.5 ರಷ್ಟು ರೈತ ವಿಮಾ ಕಂತು ರೂ.4025 ಆಗಿದೆ. ದಿ ಓರಿಯಂಟಲ್ ಇನ್ಸುರೆನ್ಸ್ ಕಂಪನಿ ಲಿಮಿಟೆಡ್ ವಿಮಾ ಕಂಪನಿಯಾಗಿ ಜಿಲ್ಲೆಗೆ ನಿಗಧಿಪಡಿಸಲಾಗಿದೆ. ಬೆಳೆ ವಿಮೆ ನೊಂದಣಿಗೆ ಡಿಸೆಂಬರ್ 30 ಕಡೆಯ ದಿನವಾಗಿದೆ. ರೈತರು ವಿಮೆಯನ್ನು ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ ಹಾಗೂ ಆರ್ಥಿಕ ಸಂಸ್ಥೆಗಳಲ್ಲಿ ನೊಂದಣಿ ಮಾಡಬಹುದು. ಹೆಚ್ಚಿನ ಮಾಹಿತಿಗಾಗಿ ಸಮೀಪದ ತೋಟಗಾರಿಕೆ ಇಲಾಖೆ ಕಚೇರಿ, ರೈತ ಸಂಪರ್ಕ ಕೇಂದ್ರ ಅಥವಾ ಹತ್ತಿರದ ಬ್ಯಾಂಕುಗಳನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆ ಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಶುಲ್ಕವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ನವಂಬರ್ 30 ರವರೆಗೆ ವಿಸ್ತರಿಸಲಾಗಿದೆ.

# ಸಂವಿಧಾನ ರಕ್ಷಣೆ ಮಾಡುವ ಜವಾಬ್ದಾರಿ ಭವಿಷ್ಯದ ಪ್ರಜೆ ಮಕ್ಕಳ ಮೇಲಿದೆ; ಶಾಸಕ ಕೆ.ಎಸ್.ಬಸವಂತಪ್ಪ

» ದಾವಣಗೆರೆ



ಶಾಲೆಗಳಲ್ಲಿ ಎಲ್ಲಾ ಸಮುದಾಯದ ಮಕ್ಕಳಿದ್ದು ಸಮಾನತೆಯನ್ನು ಕಾಣಬಹುದಾಗಿದ್ದು ಸಂವಿಧಾನದ ರಕ್ಷಣೆ ಮಾಡುವ ಜವಾಬ್ದಾರಿ ಭಾವಿ ಪ್ರಜೆಗಳಾದ ಮಕ್ಕಳ ಮೇಲಿದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಅವರು (ನ.26) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ನಗರದ ಗಾಜಿನ ಮನೆಯಲ್ಲಿ ಹಮ್ಮಿಕೊಳ್ಳಾಗಿದ್ದ. ಸಂವಿಧಾನ ದಿನ ಆಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರವು ಜಾತ್ಯಾತೀತ, ಸಾಮರಸ್ಯ ದೇಶವಾಗಲು ಸಂವಿಧಾನದಡಿ ಆಡಳಿತ ನಡೆಸಿದಾಗ ಮಾತ್ರ ಸಾಧ್ಯವಾಗಲಿದೆ. ಸಂವಿಧಾನದಿಂದ ಎಲ್ಲಾ ಸಮುದಾಯದವರಿಗೆ ನ್ಯಾಯ ಸಿಗಲಿದ್ದು ಈ ಹಿನ್ನಲೆಯಲ್ಲಿ ವಿವಿಧತೆಯಲ್ಲಿಯು ಏಕತೆಯನ್ನು ಕಾಪಾಡಿಕೊಳ್ಳಲಾಗಿದೆ.

ಸಂವಿಧಾನ ದಿನಾಚರಣೆ ಅಂಗವಾಗಿ ಸಂವಿಧಾನ ಪೀಠಿಕೆಯನ್ನು ವಾಚಿಸಲಾಗುತ್ತಿದೆ. ಸಂವಿಧಾನ ಪೀಠಿಕೆ ಓದಿದರೆ ಜಾತಿ ವ್ಯವಸ್ಥೆಯನ್ನು ನಿರ್ಮೂಲನೆ ಮಾಡಬಹುದಾಗಿದೆ. ಎಲ್ಲಾ ಧರ್ಮಗಳ ಮೇರುಗ್ರಂಥವಾಗಿದ್ದು ಸಮಾಜದಲ್ಲಿ ಶಾಂತಿ ಇರಬೇಕೆಂದರೆ ಸಂವಿಧಾನ ಮಹತ್ವವನ್ನು ಎಲ್ಲರೂ ಅರಿತುಕೊಳ್ಳಬೇಕಾಗಿದೆ. ಅಂತಹ ಸಂವಿಧಾನವನ್ನು ಬರೆದವರು ಬಾಬಾ ಸಾಹೇಬ್ ಅಂಬೇಡ್ಕರ್ ಅವರಾಗಿದ್ದು ಅವರ ಅನುಯಾಯಿಗಳಾದವರು ಎಂದಿಗೂ ಭ್ರಷ್ಟರಾಗದೇ ಎಂದಿಗೂ ಪ್ರಾಮಾಣಿಕರಾಗಿರಬೇಕೆಂದರು. ಪ್ರಗತಿ ಮತ್ತು ಸಮೃದ್ಧಿಯ ಹಾದಿಯಲ್ಲಿಸಾಗಲು ದಾರಿದೀಪವಾಗಿದೆ.ದೂರದೃಷ್ಟಿಹೊಂದಿದ್ದ ನಮ್ಮ ಸಂವಿಧಾನದ ಶಿಲ್ಪಿಗಳು ಭಾರತದ ರಾಷ್ಟ್ರೀಯತೆಯ ಮೇಲೆ ಸಂಪೂರ್ಣ ವಿಶ್ವಾಸ ಹೊಂದಿದ್ದರು ಎಂಬುದನ್ನು ಇದು ತೋರಿಸುತ್ತದೆ. ಈ ಸಂವಿಧಾನದ ಮೂಲಕ ವಿಶ್ವದ ಅತಿ ದೊಡ್ಡ ಮತ್ತು ಯಶಸ್ವಿ ಪ್ರಜಾಪ್ರಭುತ್ವ ಎಂಬ ಗೌರವ ನಮಗಿದೆ ಎಂದು ತಿಳಿಸಿದರು.

ಮಹಾಪೌರರಾದ ಚಮ್ಮನ್ ಸಾಬ್ ಕೆ ಮಾತನಾಡಿ. ಸಂವಿಧಾನ ಇಲ್ಲದೆ ದೇಶ ಮುನ್ನಡೆಯಲು ಅಸಾಧ್ಯ, ಡಾ; ಬಿ.ಆರ್ ಅಂಬೇಡ್ಕರ್ ಅವರು ದೇಶ ವಿದೇಶಗಳಿಗೆ ಹೋಗಿ ಓದಿಕೊಂಡು ನಮಗೆ ಉತ್ತಮವಾದ ಸಂವಿಧಾನವನ್ನು ನೀಡಿದ್ದಾರೆ. ಅವರು ಎಲ್ಲಾ ಧರ್ಮಗಳ ಒಳಿತಿಗಾಗಿ ಸಂವಿಧಾನವನ್ನು ಬರೆದಿದ್ದಾರೆ ಎಂದು ತಿಳಿಸಿದರು.

ದೂಡಾ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ ಮಾತನಾಡಿ ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಯಶಸ್ವಿಯಾಗಿದೇ ಎಂದರೆ ಅದಕ್ಕೆ ಬಾಬ ಸಾಹೇಬ್ ಅಂಬೇಡ್ಕರ್ ಬರೆದಿರುವಂತಹ ಸಂವಿಧಾನದಿಂದ ಸಾಧ್ಯವಾಗಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮಾತನಾಡಿ ಅನೇಕ ಹೋರಾಟಗಳ ಮೂಲಕ ದೇಶ ಸ್ವಾತಂತ್ರ್ಯ ಹೊಂದಿತು. ಈ ಅವಧಿಯಲ್ಲಿ ಬ್ರಿಟೀಷರು ಅನೇಕ ಕಾನೂನು, ಕಾಯಿದೆಗಳನ್ನು ಜಾರಿಗೆ ತಂದರು. ಜಾತ್ಯಾತೀತ ದೇಶದಲ್ಲಿ ಎಲ್ಲರನ್ನು ಒಳಗೊಳ್ಳುವ ಸಂವಿಧಾನವನ್ನು ಡಾ; ಬಿ.ಆರ್.ಅಂಬೇಡ್ಕರ್ ರವರು ಬರೆದಿದಿದ್ದು ಪ್ರಪಂಚದಲ್ಲಿ ಮಾದರಿಯಾಗಿದೆ ಎಂದರು. ನಿವೃತ್ತ ಕೆ.ಎ.ಎಸ್ ಅಧಿಕಾರಿ ರುದ್ರಪ್ಪ ಹನಗವಾಡಿ, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸದಸ್ಯರಾದ ಪ್ರೊ. ಮಲ್ಲಿಕಾರ್ಜುನ್ ಆರ್ ಹಲಸಂಗಿ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಪಾಲಿಕೆ ಉಪ ಮಹಾಪೌರರಾದ ಸೋಗಿ ಶಾಂತಕುಮಾರ್, ಆಯುಕ್ತರಾದ ರೇಣುಕಾ, ಮಹಾನಗರ ಪಾಲಿಕೆ ಸದಸ್ಯರಾದ ಮಂಜುನಾಥ ಗಡಿಗುಡಾಳ್, ಪಾಲಿಕೆ ಸದಸ್ಯರಾದ ಸವಿತಾ ಹುಲ್ಲುಮನಿ, ಸುಧಾ ಇಟ್ಟುಗುಡಿ ಮಂಜುನಾಥ್, ಮೀನಾಕ್ಷಿ ಜಗದೀಶ್, ಗೋಣಪ್ಪ, ಆಶಾ ಉಮೇಶ್, ನಿವೃತ್ತ ಪ್ರಾಧ್ಯಾಪಕರಾದ ಎ.ಬಿ.ರಾಮಚಂದ್ರಪ್ಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಕೆ.ನಾಗರಾಜ ಸ್ವಾಗತಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ನಿರೂಪಿಸಿದರು.

### ಪುರಸಭಾ ಸದಸ್ಯರಿಗೆ ಮೈಸೂರಿನ ರಾಜ್ಯ ನಗರಾಭಿರುದ್ಧಿ ತರಬೇತಿ ಸಂಸ್ಥೆಯಲ್ಲಿ ಮೂರು ದಿನ ತರಬೇತಿ ಹಾಗೂ ಅಧ್ಯಯನ ಕಾರ್ಯಕ್ರಮ

## ಮೈಸೂರಿಗೆ ಪ್ರಯಾಣ ಬೆಳಸಿದ್ದ ಪುರಸಭಾ ಸದಸ್ಯರು

» ಹೊಸದುರ್ಗ




ಹೊಸದುರ್ಗ ಪಟ್ಟಣದ ಪುರಸಭೆಯಲ್ಲಿ ಒಟ್ಟು 23 ವಾರ್ಡ್ ಗಳ ಚುನಾಯಿತ ಸದಸ್ಯರು ಹಾಗೂ 5 ಮಂದಿ ಸರ್ಕಾರದಿಂದ ನಾಮ ನಿರ್ದೇಶನಗೊಂಡ ಸದಸ್ಯರು ಮೈಸೂರಿನ ರಾಜ್ಯ ನಗರಾಭಿರುದ್ಧಿ ತರಬೇತಿ ಸಂಸ್ಥೆಯಲ್ಲಿ 3 ದಿನಗಳ ಕಾಲ ನಡೆಯಲಿರುವ ತರಬೇತಿ ಹಾಗೂ ಅಧ್ಯಯನ ಕಾರ್ಯಕ್ರಮಕ್ಕೆ ಪ್ರಯಾಣ ಬೆಳಸಿದ್ದರು.

ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಮಾತನಾಡಿ ಸಾರ್ವಜನಿಕರಿಕರಿಗೆ ಕುಡಿಯುವ ನೀರು ಪೂರೈಕೆ ಸ್ವಚ್ಛತೆ ಹಾಗೂ ಇತರೆ ಮೂಲಭೂತ ಸೌಲಭ್ಯ ಒದಗಿಸುವ ಪ್ರಮುಖ ಜವಾಬ್ದಾರಿ ಹೊತ್ತಿದ್ದು ಸಾಮಾನ್ಯ ಸಭೆಗಳನ್ನು ನಡೆಸಿ ಸಾರ್ವಜನಿಕವಾಗಿ ತೀರ್ಮಾನ ಕೈಗೊಂಡು ಕೆಲಸ ಮಾಡಿ ಅನುಷ್ಠಾನಕ್ಕೆ ತರಲಾಗುತ್ತಿರುವ ಈ ನಿಟ್ಟಿನಲ್ಲಿ "ನಗರಾಡಳಿತ " ವಿಚಾರವಾಗಿ ಪೌರಾಡಳಿತ ನಿರ್ದೇಶನಲಯ ಬೆಂಗಳೂರು ಇವರು ಎಲ್ಲಾ ಸದಸ್ಯರಿಗೆ ಮೈಸೂರಿನ ರಾಜ್ಯ ನಗರಾಭಿರುದ್ಧಿ ತರಬೇತಿ ಸಂಸ್ಥೆಯಲ್ಲಿ 3 ದಿನ ತರಬೇತಿ ಹಾಗೂ ಅಧ್ಯಯನ ಕಾರ್ಯಕ್ರಮಕ್ಕೆ ನಿಯೋಜನೆ ಮಾಡಲು ನಿರ್ದೇಶನದ ಮೇರೆಗೆ ಈ ಅಧ್ಯಯ ಪ್ರವಾಸ ಕೈಗೊಳ್ಳಲಾಗಿದೆ ಎಂದರು.

ಪುರಸಭೆ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಆನಂದ್ ಮಾತನಾಡಿ ಎಲ್ಲಾ ಸದಸ್ಯರು ಆಸಕ್ತಿಯಿಂದಾ ಭಾಗವಹಿಸಿದ್ದು ಅತ್ಯಂತ ಸಂತಸವಾಗಿದ್ದು ತರಬೇತಿಯಲ್ಲಿ ಮೈಸೂರಿನ ಮಾಜಿ ಮೇಯರ್ ಅವರು ಪುರಸಭೆ ಕಾಯ್ದೆ, ಅಧಿನಿಯಮ, ರೂಲ್ಸ್ ರೆಗ್ಯುಲಶನ್ ಕುರಿತು ಸವಿಸ್ತಾರವಾಗಿ ವಿವರಿಸಿದ್ದು ಸಾಮನ್ಯ ಸಭೆ ನಡೆಸುವಾಗ ಸದಸ್ಯರು ಹೇಗೆ ವರ್ತನೆ ಮಾಡಬೇಕು, ಯಾವ ವಿಚಾರದ ಬಗ್ಗೆ ಪ್ರಶ್ನೆ ಕೇಳಬೇಕು ಹಾಗೂ ಯಾವ ರೀತಿ ತೀರ್ಮಾನ ಗಳನ್ನು ಕೈಗೊಳ್ಳಬೇಕು ಎಂಬುದರ ಬಗ್ಗೆ ತಿಳಿಸಿದರು. ನಮ್ಮ ಪುರಸಭೆಯಲ್ಲಿ ಅಳವಡಿಸಿಕೊಂಡು ಅಭಿರುದ್ಧಿ ಬಗ್ಗೆ ಚಿಂತನೆ ಮಾಡಲಾಗುವುದು ಎಂದು ಪ್ರತಿಕ್ರಿಯಿಸಿದರು.

ಉಪಾಧ್ಯಕ್ಷೆ ಶ್ರೀಮತಿಗೀತಾಗಜೇಂದ್ರ ಮಾತನಾಡಿ ಎರಡನೇ ದಿನ ಮೈಸೂರ ಕಾರ್ಪೋರೇಶನ್ ಘನ ತ್ಯಾಜ್ಯ ಘಟಕ, ಕೊಳಚೆ ಸಂಸ್ಕರಣ ಘಟಕಕ್ಕೆ ಫೀಲ್ಡ್ ವಿಸಿಟ್ ಕರೆದು ಕೊಂಡು ಹೋಗಿ ತೋರಿಸಿದ್ದು ಅಲ್ಲಿ ಅನುಷ್ಠಾನ ಮಾಡಲು ಕೈಗೊಂಡಿರುವ ಕಾರ್ಯಕ್ರಮವು ವಿಶೇಷವಾಗಿದ್ದು ನಮ್ಮ ಎಲ್ಲಾ ಸದಸ್ಯರು ಒಟ್ಟಾಗಿ ಸಾರ್ವಜನಿಕ ರೊಂದಿಗೆ ಕೂಡಿ ಬಜೆಟ್ ನಲ್ಲಿ ಎಲ್ಲಾ ಅಂಶ ಅಳವಡಿಸಿ ಅನುದಾನದ ಲಭ್ಯತೆ ಯಂತೆ ಅನುಷ್ಠಾನಕ್ಕೆ ತರಲಾಗುವುದು ಎಂದು ಹೇಳಿದ ಅವರು ತರಬೇತಿಯಲ್ಲಿ ಊಟ ವಸತಿ ವ್ಯವಸ್ಥೆ ಉತ್ತಮವಾಗಿತ್ತು ಎಂದು ಹೇಳಿದರು.

## ಬುದ್ಧಗಯಾದ ಆಡಳಿತವನ್ನು ಬೌದ್ಧರಿಗೆ ನೀಡುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ




» ಚಿತ್ರದುರ್ಗ

ಸಂವಿಧಾನ ದೇಶಕ್ಕೆ ಸಮರ್ಪಣೆಯಾಗಿ 75 ವರ್ಷಗಳಾಗಿರುವುದರಿಂದ ಬೌದ್ಧರ ಧಾರ್ಮಿಕ ಹಕ್ಕಿಗಾಗಿ ಬಿಟಿ ಕಾಯಿದೆ-1949 ನ್ನು ರದ್ದುಪಡಿಸಿ ಬುದ್ಧಗಯಾದ ಮಹಾಬೋಧಿ ಮಹಾವಿಹಾರದ ಆಡಳಿತ ಸಂಪೂರ್ಣವಾಗಿ ಬೌದ್ಧರಿಗೆ ನೀಡುವಂತೆ ಒತ್ತಾಯಿಸಿ ಬೌದ್ಧ ಸಂಘ ಸಂಸ್ಥೆಗಳು ಅಂಬೇಡ್ಕರ್ ವಾದಿ ಸಂಘ ಸಂಸ್ಥೆಗಳು ಹಾಗೂ ದಲಿತ ಸಂಘಟನೆಗಳ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿ, ಪ್ರಧಾನಿ, ರಾಷ್ಟ್ರಪತಿ, ಬಿಹಾರದ ಮುಖ್ಯಮಂತ್ರಿ, ರಾಷ್ಟ್ರೀಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಿಗೆ ಮನವಿ ಸಲ್ಲಿಸಲಾಯಿತು.

ಬೌದ್ಧ ಸಮುದಾಯ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳು ಸಂವಿಧಾನದತ್ತ ಧಾರ್ಮಿಕ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ. ಧಾರ್ಮಿಕ ಕ್ಷೇತ್ರವನ್ನು ಸ್ವತಂತ್ರವಾಗಿ ನಿರ್ವಹಿಸುವ ಅಧಿಕಾರವನ್ನು ಸಂವಿಧಾನದ ಕಲಂ-3, 25, 26 ಮತ್ತು 29 ನ್ನು ಜಾರಿಗೊಳಿಸಲು ಅಡ್ಡಿಯಾಗಿರುವ ಬಿ.ಟಿ.ಕಾಯಿದೆ 1949 ನ್ನು ರದ್ದುಪಡಿಸಿ ಬುದ್ಧಗಯಾದ ಮಹಾಬೋಧಿ ಮಹಾವಿಹಾರದ ಆಡಳಿತವನ್ನು ಬೌದ್ಧರಿಗೆ ನೀಡಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಬಿ.ಪಿ.ತಿಪ್ಪೇಸ್ವಾಮಿ, ಬಿಎಸ್‌ಪಿ ಜಿಲ್ಲಾಧ್ಯಕ್ಷ ಎನ್.ಪ್ರಕಾಶ್, ವಕೀಲ ಬೆನಕನಹಳ್ಳಿ ಚಂದ್ರಪ್ಪ, ಪಾಳ್ಯ ಸಿ.ಕುಮಾರ್, ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲೋಕಿಕೆರೆ ಮಂಜುನಾಥ್, ಭೀಮನಕೆರೆ ಶಿವಮೂರ್ತಿ, ದಲಿತ ಮುಖಂಡ ತುರುವನೂರು ಜಗನ್ನಾಥ, ರವಿಕುಮಾರ್ ಎಸ್. ನಾಗೇಂದ್ರಪ್ಪ, ಜೆ.ಎನ್.ಬಸವರಾಜ್ ಜಾಲಿಕಟ್ಟೆ, ಮಂಜುನಾಥ, ಆರ್.ಪಾತಲಿಂಗಪ್ಪ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪ್ಯಾರಾಲೀಗಲ್ ಪರ್ಸನಲ್, ನ್ಯಾಯವಾದಿ ಹುದ್ದೆಗೆ ಅರ್ಜಿ

**ದಾವಣಗೆರೆ:** ಜಿಲ್ಲಾ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒನ್ ಸ್ಟಾಪ್ ಸೆಂಟರ್ ಸಖಿ ಕೇಂದ್ರಕ್ಕೆ ಗೌರವಧನದ ಆಧಾರದ ಮೇಲೆ ಪ್ಯಾರಾಲೀಗಲ್ ಪರ್ಸನಲ್, ನ್ಯಾಯವಾದಿ ಹುದ್ದೆಗೆ ಸಿಬ್ಬಂದಿಯನ್ನು ನೇರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಪ್ಯಾರಾಲೀಗಲ್ ಪರ್ಸನಲ್, ನ್ಯಾಯಾವಾದಿ ಹುದ್ದೆ ಸಂಖ್ಯೆ-1, ವಿದ್ಯಾರ್ಹತೆ ಕಾನೂನು ಪದವಿ, ವಕೀಲ ವೃತ್ತಿಯಲ್ಲಿ ಕನಿಷ್ಠ 3 ವರ್ಷ ಸೇವೆ ಸಲ್ಲಿಸಬೇಕು. ಸಂತ್ರಸ್ತ ಮಹಿಳೆ ಮತ್ತು ಮಕ್ಕಳ ಪ್ರಕರಣಗಳನ್ನು ನಿರ್ವಹಿಸಿದವರಿಗೆ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 7ನೇ ಮುಖ್ಯರಸ್ತೆ, ಎಂ.ಸಿ.ಸಿ. ಬಿ ಬ್ಲಾಕ್ ಕುವೆಂಪು ನಗರ, ದಾವಣಗೆರೆ-577004 ದೂ.ಸಂ:08192-295738, 9353428455 ನ್ನು ಸಂಪರ್ಕಿಸಲು ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಬೃಹತ್ ತಾಲ್ಲೂಕುಮಟ್ಟದ ವ್ಯಾಸೆಕ್ಟಮಿ ಪಾಕ್ಷಿಕದಲ್ಲಿ ಡಾ.ರೇಖಾ ಕರೆ

# ಸಂತಾನಹರಣ ಶಸ್ತ್ರಚಿಕಿತ್ಸೆಗೆ ಹಂಜರಿಕೆ ಬೇಡ

» ಚಿತ್ರದುರ್ಗ



ಹಿಂಜರಿಕೆ ಸಂಕೋಚ ಭಯ ಬಿಟ್ಟು ಪುರುಷರು ಎನ್‌ಎಸ್‌ವಿ ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡು ಹೆಣ್ಣುಮಕ್ಕಳಿಗೆ ಸಮಾನತೆ ನೀಡಿ ಎಂದು ಜಿಲ್ಲಾ ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನಾಧಿಕಾರಿ ಡಾ.ರೇಖಾ ಹೇಳಿದರು.

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ ಐಸಿಡಿಎಸ್ ಅಂಗನವಾಡಿ ಕಾರ್ಯಕರ್ತೆಯರೊಂದಿಗೆ ವಿಶೇಷ ಸಭೆಯಲ್ಲಿ ಕುಟುಂಬ ಯೋಜನೆ ಅನುಷ್ಠಾನದಲ್ಲಿ ಪುರುಷರ ಸಹಭಾಗಿತ್ವ ಕುರಿತು ಹಮ್ಮಿಕೊಂಡಿದ್ದ ಬೃಹತ್ ತಾಲ್ಲೂಕುಮಟ್ಟದ ವ್ಯಾಸೆಕ್ಟಮಿ ಪಾಕ್ಷಿಕದಲ್ಲಿ ಅವರು ಮಾತನಾಡಿದರು.


ನ.21 ರಿಂದ 28 ರವರೆಗೆ ಎನ್‌ಎಸ್‌ವಿ ಕುಟುಂಬ ಕಲ್ಯಾಣ ಯೋಜನೆ ಪುರುಷರಿಗಾಗಿ ಎಂಬ ವಿಷಯದ ಬಗ್ಗೆ ಸಮುದಾಯದೊಂದಿಗೆ ಅರಿವು ಸಪ್ತಾಹ ಹಾಗೂ ನ.28 ರಿಂದ ಡಿ.04 ರವರೆಗೆ ಎನ್‌ಎಸ್‌ವಿ ಶಸ್ತ್ರಚಿಕಿತ್ಸೆಯ ಸೇವಾ ಸೌಲಭ್ಯವನ್ನು ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಪುರುಷರು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಈ ದಿನ ನಾವು ಸಂವಿಧಾನ ದಿನ ಆಚರಣೆ ಮಾಡಿದ್ದೇವೆ. ಸಮಾನತೆ, ಭ್ರಾತೃತ್ವದ ಬಗ್ಗೆ ಮಾತನಾಡಿದ್ದೇವೆ. ಕುಟುಂಬದ ಎಲ್ಲಾ ಜವಾಬ್ದಾರಿ ಹೊತ್ತಿರುವ ಮಹಿಳೆಯರಿಗೆ ಕುಟುಂಬ ಯೋಜನೆ ಅನುಸರಿಸುವ ಮೂಲಕ ಪುರುಷರು ಸಮಾನತೆಯ ಭಾವ ತೋರಿಸಬೇಕು. ಎನ್‌ಎಸ್‌ವಿ ಸರಳ ಹೊಲಿಗೆ ರಹಿತ ನೋವಿಲ್ಲದ ಹೆಚ್ಚು ಸಮಯ ಆಸ್ಪತ್ರೆಯಲ್ಲಿ ತಂಗುವ ಗೋಜು ಇರುವುದಿಲ್ಲ. ಇಂತಹ ಸರಳ ವಿಧಾನ ಪುರುಷರು ಭಾಗವಹಿಸಿದಲ್ಲಿ ತಾಯಂದಿರ ಮರಣ ತಪ್ಪಿಸಬಹುದು ಅವರ ಮೇಲೆ ಬೀಳುವ ಹೊರೆಗಳನ್ನ ಕಡಿಮೆ ಮಾಡಿ ಸಮಾನತೆ ತೋರಿಸಬಹುದು ಎಂದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜೆ ಗೌರಮ್ಮ ಮಾತನಾಡಿ, ಹೆಂಡತಿಯನ್ನು ಪ್ರೀತಿಸುವ ಗಂಡ ಎನ್‌ಎಸ್‌ವಿ ಮಾಡಿಸಿಕೊಳ್ಳುತ್ತಾನೆ. ಅಂಗನವಾಡಿ ಕಾರ್ಯಕರ್ತೆಯರ ಬಳಿ ಗರ್ಭಿಣಿ ತಾಯಂದಿರು ಹಾಲುಣಿಸುವ ತಾಯಂದಿರು ಸದಾ ಸಂಪರ್ಕದಲ್ಲಿ ಇರುತ್ತಾರೆ. ನಮ್ಮ ಇಲಾಖೆಯ ಆಶಾ ಕಾರ್ಯಕರ್ತೆಯರು ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ಇವರೊಂದಿಗೆ ತಾವುಗಳು ಸೇರಿ ಅತ್ತೆ ಸೊಸೆಯರ ಸಭೆ ನಡೆಸಿ ಅರ್ಹ ದಂಪತಿಗಳಿಗೆ ಮನವೊಲಿಸಿ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಅರ್ಹ ಫಲಾನುಭವಿಗಳ ಪಟ್ಟಿ ತಯಾರಿಸಿ ನಮಗೆ ಮಾಹಿತಿ ನೀಡಿದರೆ ಮನೆ ಬಾಗಿಲಿಗೆ ಬಂದು ದಂಪತಿಗಳಿಗೆ ಸಮಾಲೋಚನೆ ನೀಡುತ್ತೇವೆ ಎಂದರು.ಇದೇ ಸಂದರ್ಭದಲ್ಲಿ ಪುರುಷ ಸಂತಾನಹರಣ ಶಸ್ತ್ರ ಚಿಕಿತ್ಸೆಯ ಮಾಹಿತಿ ಭಿತ್ತಿಪತ್ರ ಬಿಡುಗಡೆಗೊಳಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಕಾತ್ಯಾಯನಮ್ಮ, ತಿಪ್ಪಮ್ಮ, ನಗರ ಆರೋಗ್ಯ ಕೇಂದ್ರಗಳ ಎಲ್ಲಾ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ವ್ಯವಸ್ಥಾಪಕ ಮಹಮ್ಮದ್ ಅಲಿ, ಹಬೀಬ್, ನಾಗವೇಣಿ, ಆಶಾ ಬೋಧಕಿ ತಬೀತಾ, ಪ್ರತಿಭಾ ಇದ್ದರು.

# 'ಯಾರು ಪ್ರೀತಿಸುತ್ತಾರೋ ಅವರಿಗೆ ಮಾತ್ರ ತಿದ್ದುವ- ಶಿಕ್ಷಿಸುವ ಅಧಿಕಾರ ಇರುತ್ತದೆ

ರವೀಂದ್ರನಾಥ ಠಾಗೋರ್......





ಇದು ಬಹಳ ಅರ್ಥಪೂರ್ಣ ಒಳ ಭಾವವನ್ನು ಹೊಂದಿದೆ. ಇಂದಿನ ಸಾಮಾಜಿಕ ಮನಸ್ಥಿತಿಗೆ ಹೆಚ್ಚು ಅನ್ವಯಿಸುತ್ತದೆ.....

## ಧರ್ಮ ನಿಷ್ಠೆ ಎಂದರೆ ಪ್ರೀತಿಯೇ ಹೊರತು ದ್ವೇಷವಲ್ಲ.....



ನಾವು ಕೆಲವರ ನಡವಳಿಕೆಯನ್ನು ದ್ವೇಷಿಸುತ್ತೇವೆ ಹಾಗೆಯೇ ಅವರ ಪರಿವರ್ತನೆಯನ್ನು ಅಪೇಕ್ಷಿಸುತ್ತೇವೆ. ಆದರೆ ಅದು ಹೇಗೆ ಸಾಧ್ಯ ಎಂಬುದನ್ನು ಉಪೇಕ್ಷಿಸುತ್ತೇವೆ....

ಈಗ ನೇರ ವಿಷಯಕ್ಕೆ ಬರುವುದಾದರೆ, ಕೆಲವು ಸನಾತನ ಧರ್ಮದ ಪ್ರತಿಪಾದಕರು ಅಥವಾ ಅನುಯಾಯಿಗಳು ಮುಸ್ಲಿಮರನ್ನು ದ್ವೇಷಿಸುತ್ತಾರೆ ಹಾಗು ಅವರು ಬದಲಾಗಬೇಕು ಎಂದೂ ನಿರೀಕ್ಷಿಸುತ್ತಾರೆ. ಆದರೆ ಈ ಪ್ರಕ್ರಿಯೆಯಲ್ಲಿ ಅವರೆಂದೂ ಮುಸ್ಲಿಮರನ್ನು ಪ್ರೀತಿಸುವುದಿಲ್ಲ ಮತ್ತು ಸ್ವೀಕರಿಸುವುದಿಲ್ಲ. ಆಗ ಅವರಿಗೆ ಠಾಗೋರ್ ಅವರು ಹೇಳಿದಂತೆ ತಿದ್ದುವ ನೈತಿಕತೆಯೇ ಇರುವುದಿಲ್ಲ. ಇದು ಒಂದು ಉದಾಹರಣೆ ಮಾತ್ರ. ಇದೇ ರೀತಿ ಸನಾತನ ಧರ್ಮದವರಲ್ಲಿ ಬದಲಾವಣೆ ಬಯಸುವ ಮುಸ್ಲಿಮರಿಗೂ ಸಮನಾಗಿಯೇ ಅನ್ವಯಿಸುತ್ತದೆ. ಇದು ಸಾರ್ವಕಾಲಿಕ ಸತ್ಯ...

ಕೆಲವೊಮ್ಮೆ ಖಾಸಗಿ ಮಾತುಕತೆಗಳಲ್ಲಿ ಕಟ್ಟಾ ಕಮ್ಯುನಿಸ್ಟ್ ವಾದಿಗಳು ಸಂಘ ಪರಿವಾರದ ಹಿಂದುತ್ವ ಪ್ರತಿಪಾದಕರು ಎಂದಿಗೂ ಬದಲಾಗುವುದಿಲ್ಲ. ಆ ಪ್ರಯತ್ನವೇ ವ್ಯರ್ಥ ಎನ್ನುತ್ತಾರೆ. ಆ ಬಗ್ಗೆ ಸಣ್ಣ ಸಹಾನುಭೂತಿಯನ್ನು ಸಹಿಸುವುದಿಲ್ಲ. ಅವರು ಕೂಡಾ ಆರೆಸ್ಸೆಸ್ ಕಾರ್ಯಕರ್ತರನ್ನು ಪ್ರೀತಿಸುವುದಿಲ್ಲ. ಅದೇರೀತಿ ಸಂಘ ಪರಿವಾರದವರು ಕಮ್ಯೂನಿಸ್ಟ್ ರನ್ನು ಅತಿಯಾಗಿ ದ್ವೇಷಿಸಿ ಅವರನ್ನು ಇವರು ಬಯಸುವ ರೀತಿಯಲ್ಲಿ ಪರಿವರ್ತಿಸುವ ನೈತಿಕತೆಯನ್ನೇ ಕಳೆದುಕೊಳ್ಳುತ್ತಾರೆ...

- ಬ್ರಾಹ್ಮಣ - ದಲಿತ,
- ಒಕ್ಕಲಿಗ - ಲಿಂಗಾಯತ,
- ಕರಿಯ - ಬಿಳಿಯ,
- ಕನ್ನಡಿಗ - ತಮಿಳ,
- ಭಾರತ - ಚೀನಾ,
- ಮುಸ್ಲಿಂ - ಕ್ರಿಶ್ಚಿಯನ್,
- ಕಾಂಗ್ರೇಸ್ - ಬಿಜೆಪಿ,
- ಬಡವ - ಶ್ರೀಮಂತ.....

ಹೀಗೆ ಎಲ್ಲಾ ಸಂಘರ್ಷಗಳಲ್ಲಿ ದ್ವೇಷ ಅಸೂಯೆ, ಅನುಮಾನಗಳೇ ಮೇಲುಗೈ ಪಡೆಯುತ್ತವೆ. ಪ್ರೀತಿಗೆ ಎಲ್ಲಿಯೂ ಲವಲೇಷವೂ ಸ್ಥಾನ ಇರುವುದಿಲ್ಲ. ಇದ್ದರೂ ಅದು ಕೇವಲ ಮಾತುಗಳಿಗೆ ಮಾತ್ರ ಸೀಮಿತವಾಗುತ್ತದೆ. ಅದರ ಪರಿಣಾಮವೇ ಪರಿವರ್ತನೆ ಅತ್ಯಂತ ಕಠಿಣ ಪ್ರಕ್ರಿಯೆಯಾಗಿದೆ......

ಸಮಾಜದ ಅತ್ಯಂತ ಚಿಕ್ಕ ಘಟಕ ಕುಟುಂಬದಿಂದ ಪ್ರಾರಂಭವಾಗಿ ಅಂತರಾಷ್ಟ್ರೀಯ ಮಟ್ಟದವರೆಗೆ ಇದು ಸಾರ್ವಕಾಲಿಕ ಸತ್ಯವೇ ಆಗಿದೆ....

ನಮ್ಮ ಮನೆಯಲ್ಲಿ ನಮ್ಮ ಮಕ್ಕಳನ್ನಾಗಲಿ, ಗಂಡ ಹೆಂಡತಿಯನ್ನಾಗಲಿ, ಅಪ್ಪಾ ಅಮ್ಮ ಮಕ್ಕಳಾಗಲಿ ಯಾವುದೋ ಕಾರಣಕ್ಕಾಗಿ ಬೈದರೇ ಅಥವಾ ಹೊಡೆದರೆ ಸಾಮಾನ್ಯವಾಗಿ ಮತ್ತು ಸಹಜ ಪರಿಸ್ಥಿತಿಯಲ್ಲಿ ಅವರು ಕೆಲವೇ ಕ್ಷಣಗಳಲ್ಲಿ ಅಥವಾ ಕೆಲವೇ ದಿನಗಳಲ್ಲಿ ಮತ್ತೆ ಎಲ್ಲವನ್ನೂ ಮರೆಯುತ್ತಾರೆ ಅಲ್ಲದೇ ಕೆಲವೊಮ್ಮೆ ಸಂಬಂಧ ಮತ್ತಷ್ಟು ಹೆಚ್ಚಾಗಬಹುದು. ಇದಕ್ಕೆಲ್ಲ ಮೂಲ ಕಾರಣ ನಮಗೆ ಅವರ ಬಗ್ಗೆ ಇರುವ ಪ್ರೀತಿ ಅವರಿಗೇ ಮನವರಿಕೆಯಾಗಿರುತ್ತದೆ. ಇಲ್ಲಿ ಯಾವುದೇ ಕೃತಕ ನಾಟಕಕ್ಕೆ ಅವಕಾಶ ಇರುವುದಿಲ್ಲ. ಅಷ್ಟೇ ಏಕೆ ಅನೇಕ ಸಾಕು ಪ್ರಾಣಿಗಳ ವಿಷಯದಲ್ಲಿ ಸಹ ಇದು ಎಷ್ಟೊಂದು ವಾಸ್ತವ ಅಲ್ಲವೇ. ನಾವು ಅಂದರೆ ಮನೆಯವರು ಹೊಡೆದರು ಅವು ಬಾಲ ಅಲ್ಲಾಡಿಸುತ್ತಾ ನಮ್ಮ ಬಳಿಯೇ ಬರುತ್ತವೆ. ಏಕೆಂದರೆ ನಾವು ಪ್ರೀತಿಸುವುದು ಅವಕ್ಕೆ ಗೊತ್ತಿರುತ್ತದೆ. ಇದು ಹಾಗೆಯೇ ದೇಶ ಭಾಷೆ ಮೀರಿ ವಿಸ್ತಾರವಾಗುತ್ತಾ ಹೋಗುತ್ತದೆ.....

ಸಾಮಾಜಿಕ ಜಾಲತಾಣಗಳ ಬೆಳವಣಿಗೆಯ ಈ ಸಂದರ್ಭದಲ್ಲಿ ಠಾಗೋರ್ ಮಾತುಗಳು ಸಾಕಷ್ಟು ಪ್ರಾಮುಖ್ಯತೆ ಪಡೆಯುತ್ತದೆ. ಭಿನ್ನ ಅಭಿಪ್ರಾಯದ ವ್ಯಕ್ತಿಗಳನ್ನು ಪ್ರೀತಿ ಗೌರವ ಸಹನೆ ಸಭ್ಯತೆಯಿಂದ ಮಾತನಾಡಿಸಿ ಅವರ ಮನಃ ಪರಿವರ್ತನೆ ಅಥವಾ ಮನವೊಲಿಕೆಗೆ ಪ್ರಯತ್ನಿಸುವ ಬದಲು ಅವರನ್ನು ಕೆಟ್ಟ ಮಾತುಗಳಿಂದ ನಿಂದಿಸಿ ದ್ವೇಷ ಅಸೂಯೆ ಸೃಷ್ಟಿ ಮಾಡುವವರೇ ಹೆಚ್ಚಾಗಿದ್ದಾರೆ. ನಾವು ಅವರನ್ನು ಪ್ರೀತಿಸದೇ ಬದಲಾವಣೆ ಸಾಧ್ಯವಿಲ್ಲ ಎಂಬ ಪ್ರಾಥಮಿಕ ಅರಿವು ಸಹ ಅನೇಕ ಜನರಿಗೆ ಇಲ್ಲ. ಬಹುತೇಕ ಉಢಾಫೆ ಮನಸ್ಥಿತಿಯ ಜನರೇ ಹೆಚ್ಚಾಗಿದ್ದಾರೆ.......

ನಾವು ಯಾರಲ್ಲಿಯಾದರೂ ಸಾಮಾಜಿಕ ಬದಲಾವಣೆ ಬಯಸುವವರಾದರೆ, ಅತ್ಯಂತ ಜವಾಬ್ದಾರಿಯುತ ಪ್ರೀತಿ, ತಾಳ್ಮೆ, ಸಭ್ಯತೆ, ಸಹಕಾರ, ಕರುಣೆ, ಕ್ಷಮಾಗುಣ ಮುಂತಾದ ಮಾನವೀಯ ಮೌಲ್ಯಗಳನ್ನು ನಮ್ಮ ದಿನನಿತ್ಯದ ಚಟುವಟಿಕೆಗಳಲ್ಲಿ ಅಳವಡಿಸಿಕೊಂಡಿರಬೇಕು. ಕೇವಲ ಕೋಪ, ದ್ವೇಷ, ಅಸೂಯೆ, ಸಿಡುಕು ಮಾತು, ಏಕವಚನದ ಪ್ರಯೋಗಗಳಿಂದ ಪರಿಸ್ಥಿತಿಯನ್ನು ಮತ್ತಷ್ಟು ಹದಗೆಡಿಸಬಹುದೇ ಹೊರತು ಯಾವುದೇ ಪರಿವರ್ತನೆ ಸಾಧ್ಯವಾಗುವುದಿಲ್ಲ....

ಎಡಪಂಥೀಯ ಮತ್ತು ಬಲಪಂಥೀಯ ಹಾಗೂ ಸನಾತನ ಮತ್ತು ಮುಸ್ಲಿಂ ವಿಚಾರಗಳ ಪ್ರತಿಪಾದಕರು ಇದನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು. ನಿಜವಾದ ದೇಶ ಭಕ್ತಿ - ಧರ್ಮ ನಿಷ್ಠೆ ಎಂದರೆ ಪ್ರೀತಿಯೇ ಹೊರತು ದ್ವೇಷವಲ್ಲ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಮರಡಿಹಳ್ಳಿ ಗೊಲ್ಲರಹಟ್ಟಿ : ಜಾಗೃತಿ ಕಾರ್ಯಕ್ರಮ



» ಚಿತ್ರದುರ್ಗ

ಹಿರಿಯೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಮರಡಿಹಳ್ಳಿ ಗೊಲ್ಲರಹಟ್ಟಿಯಲ್ಲಿ ಡಿ.25 ರಂದು ಮೌಢ್ಯಾಚರಣೆ ಪದ್ಧತಿ ವಿರುದ್ಧ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಲಿಂಗತಜ್ಞೆ ಗೀತಾ.ಡಿ ಮೌಢ್ಯಾಚರಣೆಯಿಂದ ಮಹಿಳೆಯರ ಮತ್ತು ಮಕ್ಕಳ ಮೇಲೆ ಆಗುವ ದೈಹಿಕವಾಗಿ ಮತ್ತು ಮಾನಸಿಕವಾಗಿ ಪರಿಣಾಮಗಳ ಬಗ್ಗೆ ಮಾಹಿತಿ ನೀಡಿದರು. ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳು ಕಂಡುಬಂದರೆ ಮಕ್ಕಳ ಸಹಾಯವಾಣಿ ಸಂಖ್ಯೆ 1098, ಮಹಿಳಾ ಸಹಾಯವಾಣಿ ಸಂಖ್ಯೆ 181 ಕರೆ ಮಾಡುವಂತೆ ಹೇಳಿದರು. ಗ್ರಾಮದಲ್ಲಿ 2 ವರ್ಷಗಳಿಂದ ಮೌಢ್ಯಗಳನ್ನು ತೊರೆದು ವಾಸಿಸುತ್ತಿರುವುದಾಗಿ ಗ್ರಾಮದ ಮಹಿಳೆಯರು ಅಧಿಕಾರಿಗಳಿಗೆ ತಿಳಿಸಿದರು. ಗ್ರಾ.ಪಂ.ಅಧ್ಯಕ್ಷೆ ಶಾರದಮ್ಮ, ಸದಸ್ಯೆ ಚಿತ್ತಮ್ಮ, ಎನ್.ಆರ್.ಎಲ್.ಎಂ. ಒಕ್ಕೂಟದ ಅಧ್ಯಕ್ಷೆ ಸರೋಜಾ, ಅಂಗನವಾಡಿ ಮೇಲ್ವಿಚಾರಕಿ ರೇಣುಕಾ, ಆಶಾ ಕಾರ್ಯಕರ್ತೆ ಭಾವನ ಶಾಲೆ ಮುಖ್ಯ ಶಿಕ್ಷಕ ತಿಮ್ಮಣ್ಣ, ಜಿಲ್ಲಾ ಮಿಷನ್ ಸಂಯೋಜಕ ವಿನಯ್.ಬಿ, ಊರಿನ ದೇವಸ್ಥಾನದ ಪೂಜಾರಿಗಳು ಮತ್ತು ಊರಿನ ಪಟೇಲರು ಹಾಗೂ ಗ್ರಾಮಸ್ಥರು ಅಂಗನವಾಡಿ ಕಾರ್ಯಕರ್ತರು ಗ್ರಾಮದ ಮಹಿಳೆಯರು ಹಾಜರಿದ್ದರು.

# ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿಗೆ ಒತ್ತಾಯ

» ಚಿತ್ರದುರ್ಗ

ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕರ್ನಾಟಕ ದಲಿತ ಸಂಘರ್ಷ ಸಮಿತಿ ಪರಿವರ್ತನಾ ವಾದ ರಾಜ್ಯ ಮಟ್ಟದ ಕಾರ್ಯಕರ್ತರ ಸಮಾವೇಶದಲ್ಲಿ ಮಂಡಿಸಿದ ನಿರ್ಣಯಗಳನ್ನು ಈಡೇರಿಸುವಂತೆ ಜಿಲ್ಲಾ ಪ್ರಧಾನ ಸಂಚಾಲಕರಾದ ಮಂಜುನಾಥ್ ಹೆಗ್ಗೆರೆ ಎರಡು ಸರ್ಕಾರಗಳನ್ನು ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯನ್ನು ಜಾರಿಗೆ ತರುವುದು ಸಂವಿಧಾನ ಬದ್ಧವಾಗಿದ್ದು ಪರಿಶಿಷ್ಟ ಜಾತಿಗಳ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ದತ್ತಾಂಶಗಳ ಆಧಾರದ ಮೇಲೆ ರಾಜ್ಯ ಸರ್ಕಾರವು ಈ ಕುರಿತು ಆದೇಶ ಹೊರಡಿಸುವ ಅಧಿಕಾರವನ್ನು ಹೊಂದಿದೆ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದ್ದು, ಅದರಂತೆ ರಾಜ್ಯ ಸರ್ಕಾರವು ಪರಿಶಿಷ್ಟ ಒಳ ಮೀಸಲಾತಿಗಾಗಿ ಸರ್ಕಾರಿ ಆದೇಶ ಹೊರಡಿಸಬೇಕು.ಶೋಷಿತ ಜಾತಿಗಳಿಗೆ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ರಾಜಕೀಯ, ಮತ್ತಿತರ ಕ್ಷೇತ್ರಗಳಲ್ಲಿ ಜಾತಿ ಸಂಖ್ಯಾವಾರು ಮೀಸಲಾತಿ ಕಲ್ಪಿಸಲು ಕೋರ್ಟ್ ತೀರ್ಪುಗಳ ಪ್ರಕಾರ ಅಗತ್ಯವಿರುವ ದತ್ತಾಂಶಗಳನ್ನು ಒಳಗೊಂಡಿರುವ ರಾಜ್ಯ ಸರ್ಕಾರವು ರಚಿಸಿರುವ ಕಾಂತರಾಜ ಅಧ್ಯಕ್ಷತೆಯ ಆಯೋಗದ ಮತ್ತು ಹಿಂದುಳಿದ ವರ್ಗದ ಆಯೋಗದ ಮಾಜಿ ಅಧ್ಯಕ್ಷರಾದ ಜಯ ಪ್ರಕಾಶ ಹೆಗ್ಡೆ ನೇತೃತ್ವದ



ಪರಿಷ್ಕೃತ ವರದಿಯನ್ನು ಅಂಗೀಕರಿಸಿ ಅನುಷ್ಠಾನಗೊಳಿಸಬೇಕು.

ಸರಕು ಮತ್ತು ಸೇವೆಗಳಲ್ಲಿ ಪ.ಜಾತಿ/ಪ.ಪಂಗಡ/ಹಿಂದುಳಿದ ವರ್ಗಗಳಿಗೆ ಜನಸಂಖ್ಯಾವಾರು ಮೀಸಲಾತಿಯನ್ನು ರೂ. 1 ಲಕ್ಷ ಗರಿಷ್ಠ ಮಿತಿ ಇರುವಂತೆ ಹೊರಡಿಸಲಾಗಿರುವ ಸರ್ಕಾರಿ ಆದೇಶಕ್ಕೆ ಗರಿಷ್ಠ 1 ಕೋಟಿ ಮಿತಿಏರಿಕೆ ತಿದ್ದುಪಡಿ ಮಾಡಿ ಸರ್ಕಾರಿ ಆದೇಶ ಹೊರಡಿಸುವ ಮೂಲಕ ಪರಿಶಿಷ್ಟರಿಗೆ ಸ್ವ ಉದ್ಯೋಗ ಅವಕಾಶಗಳನ್ನು ಹೆಚ್ಚಿಸಬೇಕು. ಭೂ ಸುಧಾರಣಾ ಕಾಯ್ದೆ, ಇನಾಂ ರದ್ದಿಯಾತಿ ಕಾಯ್ದೆಗಳ ಪರಿಶಿಷ್ಟ ಗೇಣಿದಾರರಿಗೂ ಮತ್ತು ಕೋಟಿ. ಕುಲವಾಡಿಕೆ ಮತ್ತು ತಳವಾರಿಕೆ ಗ್ರಾಮೀಣ ಸೇವೆಗಳ ಭೂಮಿ ಹೊಂದಿದ ಪರಿಶಿಷ್ಟರಿಗೂ ಸದರಿ ಕಾಯ್ದೆ ಅನ್ವಯಿಸುವಂತೆ ಮುಂದಿನ ಅಧಿವೇಶನದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು. ಬೆಲೆ ಏರಿಕೆ ಮತ್ತು ಹಣದುಬ್ಬರಗಳ ಹಿನ್ನಲೆಯಲ್ಲಿ ಸರ್ಕಾರಿ ಹಾಸ್ಟೆಲ್‌ಗಳಲ್ಲಿ ಭೋಜನ ವೆಚ್ಚವನ್ನು ಕನಿಷ್ಠ ಮಾಸಿಕ ರೂ. 3000/- ಕ್ಕೆ ಏರಿಸಬೇಕು ಮತ್ತು ಬಡ ಪರಿಶಿಷ್ಟ ಕಾಲೇಜ್ ವಿದ್ಯಾರ್ಥಿಗಳಿಗೆ ಉಚಿತವಾಗಿ ಲೇಖನ ಸಾಮಾಗ್ರಿ ಮತ್ತಿತರ ಸರಕುಗಳನ್ನು ರಾಜ್ಯ ಸರ್ಕಾರ ಮಂಜೂರು ಮಾಡಬೇಕು. ರಾಜ್ಯದ್ಯಂತ ಪರಿಶಿಷ್ಟ ವಸತಿ ಹೀನರಿಗೆ ವಸತಿ, ಹೀನರಿಗೆ ವಸತಿ, ಭೂಹೀನರಿಗೆ ಭೂಮಿಯನ್ನು ಉಚಿತವಾಗಿ ಮಂಜೂರು ಮಾಡಬೇಕು.ರಾಜ್ಯ ಸರ್ಕಾರವು ರಾಷ್ಟ್ರೀಯ ಮಟ್ಟದಲ್ಲಿ "ಚಂದ್ರಗುಪ್ತಮೌರ್ಯ ಸ್ಮಾರಕ. ವಸ್ತು ಸಂಗ್ರಹಾಲಯ ಮತ್ತು ಸಂಶೋಧನಾ ಕೇಂದ್ರ" ವನ್ನು ಸ್ಥಾಪಿಸಲು 10 ಎಕರೆ ಸರ್ಕಾರಿ ಭೂಮಿಯನ್ನು ಮತ್ತು 50 ಕೋಟಿ ಅನುದಾನವನ್ನು ಮಂಜೂರು ಮಾಡಬೇಕು.ಸಾರ್ವಜನಿಕ ಕಲ್ಯಾಣ ಇಲಾಖೆಯ ಎಲ್ಲಾ ಕ್ರೈಸ್ ವಸತಿ ಪ್ರೌಢಶಾಲೆಗಳನ್ನುವಸತಿಕಾಲೇಜುಗಳನ್ನಾಗಿ ಮೇಲ್ದರ್ಜೆಗೇರಿಸಬೇಕು ಮತ್ತು ಎಲ್ಲಾ ವಸತಿ ಕಾಲೇಜುಗಳಲ್ಲಿ ನೂತನವಾಗಿ ಪಿ.ಯು.ಸಿ. ಕಾಮರ್ಸ್ ವಿಭಾಗವನ್ನು ಆರಂಭಿಸಬೇಕು.ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು 17% ಗೆ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು 7% ಗೆ ಏರಿಕೆ ಮಾಡಿ ರಾಜ್ಯ ಸರ್ಕಾರವು 2022 ರಲ್ಲಿ ಸರ್ಕಾರಿ ಆದೇಶ ಹೊರಡಿಸಿದ್ದು, ಇದರಿಂದಾಗಿ ರಾಜ್ಯದಲ್ಲಿ ಒಟ್ಟು ಮೀಸಲಾತಿಯ ಪ್ರಮಾಣವನ್ನು 50% ನಿಂದ 56 % ಗೆ ಏರಿಕೆ ಆಗಿದ್ದು ಇದನ್ನು ರಕ್ಷಿಸಲು ಕೇಂದ್ರ ಸರ್ಕಾರವು ಸದರಿ ಏರಿಕೆಯನ್ನು ಸಂವಿಧಾನದ 9ನೇ ಷೆಡ್ಯೂಲ್ ಗೆ ಸೇರಿಸುವಂತೆ ರಾಜ್ಯ ಸರ್ಕಾರವು ಕೇಂದ್ರವನ್ನು ಆಗ್ರಹಿಸಲಾಯಿತು. ಪರಿಶಿಷ್ಟ ಜಾತಿಗಳ ಮತ್ತು ಪರಿಶಿಷ್ಟ ಪಂಗಡಗಳ ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ಪಡೆದವರು ಮತ್ತು ನೀಡಿದ ಅಧಿಕಾರಿಗಳಿಗೂ ಜೈಲು ಶಿಕ್ಷೆ ವಿಧಿಸಬೇಕು ಎಂದರು.

ರಾಜ್ಯ ಸರ್ಕಾರವು 2023 ರಲ್ಲಿ ಗುತ್ತಿಗೆ ಆಧಾರದ ನೇಮಕಾತಿಯಲ್ಲಿ ಪ. ಜಾತಿ/ಪ.ಪಂಗಡ/ಹಿಂದುಳಿದ ವರ್ಗದ ಮಹಿಳೆಯರಿಗೆ ಹೊರಡಿಸಿರುವ ಮೀಸಲಾತಿ ಆದೇಶದಲ್ಲಿ ಇರುವ ದೋಷಗಳನ್ನು ಸರಿ ಪಡಿಸಿ ತಿದ್ದುಪಡಿ ಆದೇಶ ಹೊರಡಿಸಬೇಕು.ಪರಿಶಿಷ್ಟ ಜಾತಿಗಳ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆ 1989 ರ ಅಡಿಯಲ್ಲಿ ಕೇಂದ್ರ ಸರ್ಕಾರವು ಕಲಂ 18 ಎ ಸೇರ್ಪಡೆಗೊಳಿಸಿದ್ದು ಇದನ್ನು ಕರ್ನಾಟಕದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ, ಸೆಷನ್ ಕೋರ್ಟ್‌ಗಳಲ್ಲಿ, ನ್ಯಾಯಾಂಗ ಇಲಾಖೆಯಲ್ಲಿ ಕಟ್ಟು ನಿಟ್ಟಾಗಿ ಅನುಷ್ಠಾನಗೊಳಿಸಬೇಕು.

ಕರ್ನಾಟಕ ರಾಜ್ಯದಲ್ಲಿ ಹಾಸನ, ಬೆಂಗಳೂರು ಸೇರಿದಂತೆ 7 ಜಿಲ್ಲೆಗಳ 10 ಊರುಗಳಿಗೆ ಡಾ. ಬಿ.ಆರ್. ಅಂಬೇಡ್ಕರ್ ರವರು ಭೇಟಿ ನೀಡಿದ್ದು ಅಲ್ಲೆಲ್ಲ ಸ್ಮಾರಕಗಳ ನಿರ್ಮಾಣಕ್ಕಾಗಿ ಸ್ವಲ್ಪ ಸರ್ಕಾರಿ ಭೂಮಿ, ಸ್ವಲ್ಪ ಅನುದಾನ ಮುಂಜೂರು ಮಾಡಿ ಸರ್ಕಾರಿ ಆದೇಶವಾಗಿದ್ದು ಇದು ಸಾಲದಾಗಿದೆ... ಪ್ರಸ್ತುತ ಸರ್ಕಾರವು 10 ಸ್ಮಾರಕಗಳಿಗೆ ತಲಾ ಹೆಚ್ಚುವರಿ 10 ಎಕರೆ ಸರ್ಕಾರಿ ಭೂಮಿ ಮತ್ತು ತಲಾ 10 ಕೋಟಿ ಹೆಚ್ಚುವರಿ ಅನುದಾನವನ್ನು ಎಸ್.ಸಿ.ಎಸ್.ಪಿ. ಟಿ.ಎಸ್.ಪಿ ಯೋಜನೆಯಡಿಯಲ್ಲಿ ಮಂಜೂರು ಆಗ್ರಹಿಸಿದ್ದಾರೆ.

ಗೋಷ್ಠಿಯಲ್ಲಿ ಪ್ರಧಾನ ಸಂಚಾಲಕ ಗೋವಿಂದಪ್ಪ, ಕೆ.ಟಿ.ಮುತ್ತುರಾಜ್, ಸಂಚಾಲಕ ಮಂಜುನಾಥ್, ಕಣ್ಣಮಪ್ಪ, ಸಿದ್ದಮ್ಮ, ಹೃದಯ ಸೂರನಹಳ್ಳಿ, ಕಿರಣ್, ಮಹಾಲಿಂಗಪ್ಪ, ಮಂಜುಳ ಶರಣಮ್ಮ ಸೇರಿದಂತೆ ಇತರರು ಭಾಗವಹಿಸಿದ್ದರು.

## ನಗರ ಸಭೆ ಆಯವ್ಯಯ : ನ.28 ರಂದು ಸಲಹಾ ಸಭೆ

ಚಿತ್ರದುರ್ಗ: 2025-26ನೇ ಸಾಲಿನ ನಗರ ಸಭೆ ಆಯವ್ಯಯ ಹಾಗೂ ಅಭಿವೃದ್ಧಿ ಯೋಜನೆಗಳ ಕುರಿತು ನ.28 ರಂದು ನಗರಸಭೆ ಅಧ್ಯಕ್ಷೆ ಸುಮಿತ.ಬಿ.ಎನ್ ಕಚೇರಿಯಲ್ಲಿ ಸಲಹಾ ಸಭೆ ಆಯೋಜಿಸಲಾಗಿದೆ. ಬೆಳಿಗ್ಗೆ 11 ಗಂಟೆಯಿಂದ ನಗರದ ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ವರ್ತಕರು, ನಿವೃತ್ತ ಅಧಿಕಾರಿಗಳು, ನೌಕರರು, ಪತ್ರಕರ್ತರು, ಹಿರಿಯ ನಾಗರಿಕರು ಹಾಗೂ ಸಾರ್ವಜನಿಕರು ಸಲಹಾ ಸಭೆ ಆಗಮಿಸಿ ಸಲಹೆ ಸೂಚನೆಗಳನ್ನು ನೀಡಬಹುದು ಎಂದು ಪೌರಾಯುಕ್ತೆ ಎಂ.ರೇಣುಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T